ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 238 RNI Number : KNKAN/25/A2770 09-09-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :238 ರಾಯಚೂರು 09-09-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ಶೀಘ್ರದಲ್ಲೇ ಇನ್ನೂ 25 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಣೆ : ಪರಮೇಶ್ವರ್

ಬೆಂಗಳೂರು, ಸೆ. 9

ರಾಜ್ಯದಲ್ಲಿ ಬರಪೀಡಿತ ಪ್ರದೇಶಗಳ ಘೋಷಣೆ ಪ್ರಕ್ರಿಯೆ ಇನ್ನೂ ಮುಕ್ತಾಯವಾಗಿಲ್ಲ. ಎರಡನೇ ಹಂತದ ಪರಿಶೀಲನೆ ನಡೆಯುತ್ತಿದ್ದು, 25 ತಾಲ್ಲೂಕುಗಳು ಬರಪೀಡಿತ ಪ್ರದೇಶಗಳೆಂದು ಘೋಷಣೆಗೆ ಅರ್ಹತೆ ಪಡೆದಿವೆ. ಶೀಘ್ರದಲ್ಲೇ ಅವುಗಳನ್ನು ಘೋಷಿಸಲಾಗುವುದು ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.



ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮೊದಲ ಹಂತದಲ್ಲಿ ಈಗಾಗಲೇ 101 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ. ಮುಂಗಾರು ಹಾಗೂ ಹಿಂಗಾರು ಮಳೆ ಪರಿಸ್ಥಿತಿಯ ಪರಿಶೀಲನೆ ಮುಂದುವರಿದಿರುವುದರಿಂದ ಹಂತ ಹಂತವಾಗಿ ಬರ ಘೋಷಣೆ ಮಾಡಲಾಗುತ್ತಿದೆ ಎಂದರು.

ಕಳೆದ ವರ್ಷ ಸುಮಾರು 200 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿತ್ತು. ಈ ಬಾರಿಯೂ ಕರಾವಳಿ ಭಾಗವನ್ನು ಹೊರತುಪಡಿಸಿ ರಾಜ್ಯದ ಬಹುತೇಕ ಭಾಗದಲ್ಲಿ ಬರ ಪರಿಸ್ಥಿತಿ ಇರುವುದರಿಂದ 200ಕ್ಕೂ ಹೆಚ್ಚು ತಾಲ್ಲೂಕುಗಳು ಬರಪಟ್ಟಿಗೆ ಸೇರುವ ಸಾಧ್ಯತೆ ಇದೆ ಎಂದು ಹೇಳಿದರು.

ಕೆಲವು ಶಾಸಕರು ತಮ್ಮ ತಾಲ್ಲೂಕುಗಳನ್ನು ಉದ್ದೇಶಪೂರ್ವಕವಾಗಿ ಬರಪಟ್ಟಿಯಿಂದ ಕೈಬಿಡಲಾಗಿದೆ ಎಂದು ಆರೋಪಿಸಿರುವುದನ್ನು ತಳ್ಳಿಹಾಕಿದ ಅವರು, ಬರ ಘೋಷಣೆಯಲ್ಲಿ ರಾಜ್ಯ ಸರ್ಕಾರದ ರಾಜಕೀಯ ಪಾತ್ರ ಇಲ್ಲ. ಕೇಂದ್ರ ಸರ್ಕಾರದ ಮಾರ್ಗಸೂಚಿ, ಉಪಗ್ರಹ ಚಿತ್ರಗಳು, ಗ್ರೌಂಡ್ ಟ್ರೂಥಿಂಗ್ ಹಾಗೂ ವೈಜ್ಞಾನಿಕ ಅಧ್ಯಯನದ ಆಧಾರದಲ್ಲೇ ಬರಪೀಡಿತ ಪ್ರದೇಶಗಳನ್ನು ಘೋಷಿಸಲಾಗುತ್ತದೆ ಎಂದು ಸ್ಪಷ್ಟಪಡಿಸಿದರು.

ರಾಜ್ಯ ಸರ್ಕಾರ ಮನಬಂದಂತೆ ಬರ ಘೋಷಣೆ ಮಾಡಿದರೆ ಕೇಂದ್ರದಿಂದ ಪರಿಹಾರ ಪಡೆಯಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಕೇಂದ್ರದ ನಿಯಮಗಳ ಪ್ರಕಾರವೇ ಪ್ರಕ್ರಿಯೆ ಅನುಸರಿಸಲಾಗುತ್ತಿದೆ ಎಂದು ತಿಳಿಸಿದರು.

ನೈಸ್ ನಿವೇಶನ ಹಂಚಿಕೆ ಕುರಿತು

ಮೂರನೇಯ ಪುಟಕ್ಕೆ

ಎಪಿಎಂಸಿಗಳಲ್ಲಿ ಬಾಲಕಾರ್ಮಿಕ ಪದ್ಧತಿ ತಕ್ಷಣ ನಿಲ್ಲಿಸಿ : ಸಿಎಂ

ಬೆಂಗಳೂರು : ಯಶವಂತಪುರ ಎಪಿಎಂಸಿಯಲ್ಲಿ ಬಾಲಕಾರ್ಮಿಕರನ್ನು ಕೆಲಸಕ್ಕೆ ಬಳಸುತ್ತಿರುವುದು ಕಂಡುಬಂದ ಹಿನ್ನೆಲೆಯಲ್ಲಿ, ಬಾಲಕಾರ್ಮಿಕ ಪದ್ಧತಿಯನ್ನು ತಕ್ಷಣದಿಂದಲೇ ನಿಲ್ಲಿಸಿ ತಪ್ಪಿತಸ್ಥರನ್ನು ಬಂಧಿಸಿ ಪ್ರಕರಣ ದಾಖಲಿಸುವಂತೆ ಜಿಲ್ಲಾಧಿಕಾರಿ ಹಾಗೂ ಪೊಲೀಸರಿಗೆ ಸೂಚನೆ ನೀಡಿದ್ದೇನೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಮಂಗಳವಾರ ಯಶವಂತಪುರ ಎಪಿಎಂಸಿಗೆ ದಿಢೀರ್ ಭೇಟಿ ನೀಡಿ ರೈತರು, ಕೂಲಿ ಕಾರ್ಮಿಕರು ಹಾಗೂ ವ್ಯಾಪಾರಿಗಳೊಂದಿಗೆ ಚರ್ಚಿಸಿದ ಬಳಿಕ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

ಸಣ್ಣ ಮಕ್ಕಳಿಂದ ಯಾವುದೇ ರೀತಿಯ ಕೆಲಸ ಮಾಡಿಸುವುದನ್ನು ತಕ್ಷಣ ನಿಲ್ಲಿಸಬೇಕು. ರಾಜ್ಯದ



ಇತರೆ ಎಪಿಎಂಸಿಗಳಿಗೂ ಸಚಿವರು ಭೇಟಿ ನೀಡಿ ಅಲ್ಲಿನ ಸಮಸ್ಯೆಗಳು ಹಾಗೂ ದೂರುಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗುವುದು ಎಂದು ಹೇಳಿದರು.

ಯಶವಂತಪುರ ಎಪಿಎಂಸಿ ರೈತರು ಮತ್ತು ವ್ಯಾಪಾರಿಗಳ ನಡುವಿನ ಪ್ರಮುಖ ಕೊಂಡಿಯಾಗಿದ್ದು, ದೇಶದ ವಿವಿಧ ಭಾಗಗಳಿಂದ ಕೃಷಿ ಉತ್ಪನ್ನಗಳು ಇಲ್ಲಿ ಬರುತ್ತವೆ. ಇಲ್ಲಿನ ಕೃಷಿ ಉತ್ಪನ್ನಗಳ ಗುಣಮಟ್ಟ ಮತ್ತು ರುಚಿಗೆ ಬೇರೆ ರಾಜ್ಯಗಳ ಉತ್ಪನ್ನಗಳಿಗಿಂತ ವಿಶೇಷತೆ ಇದೆ ಎಂದು ಹೇಳಿದರು.

ರೈತರು ದಲ್ಲಾಳಿಗಳು ಮತ್ತು ವರ್ತಕರು ಪಡೆಯುತ್ತಿರುವ ಕಮಿಷನ್ ಕುರಿತು ದೂರು ನೀಡಿದ್ದಾರೆ. ಈ ಬಗ್ಗೆ ಸಮಗ್ರ ಪರಿಶೀಲನೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ರಾಜ್ಯದ ಮುಖ್ಯಸ್ಥನಾಗಿ ರೈತರ ಸಮಸ್ಯೆ ಮತ್ತು ಕಷ್ಟಗಳನ್ನು ಅರಿಯುವುದು ನನ್ನ ಕರ್ತವ್ಯ. ಎಪಿಎಂಸಿಯಲ್ಲಿ ರೈತರು, ಮಹಿಳಾ ಕೂಲಿ ಕಾರ್ಮಿಕರು, ಮಧ್ಯವರ್ತಿಗಳು ಹಾಗೂ ವ್ಯಾಪಾರಿಗಳೊಂದಿಗೆ ನೇರವಾಗಿ ಮಾತನಾಡಿ ಅವರ ಸಮಸ್ಯೆಗಳನ್ನು

ಮೂರನೇಯ ಪುಟಕ್ಕೆ

ಮಹತ್ವಾಕಾಂಕ್ಷೆ ಜಿಲ್ಲೆ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆ

ಯೋಜನೆ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕಾರ್ಯಕ್ಷೇತ್ರ ವೀಕ್ಷಣೆ ಮಾಡಿ: ಉಜ್ವಲ್ ಕುಮಾರ್ ಘೋಷ್

ರಾಯಚೂರು ಸೆಪ್ಟಂಬರ್ 08 ರಾಯಚೂರು ಮಹತ್ವಾಕಾಂಕ್ಷಿ ಜಿಲ್ಲೆ ಯೋಜನೆಯ ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ಕಾಲಕಾಲಕ್ಕೆ ಕಾರ್ಯಕ್ಷೇತ್ರವನ್ನು ವೀಕ್ಷಣೆ ಮಾಡಬೇಕು ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ವಾಣಿಜ್ಯ ವಿಭಾಗದ ಜಂಟಿ ಕಾರ್ಯದರ್ಶಿಗಳು ಹಾಗೂ ಸಂಪೂರ್ಣತಾ ಮಹತ್ವಾಕಾಂಕ್ಷಿ ಕಾರ್ಯಕ್ರಮದ ಕೇಂದ್ರ ಸರಕಾರದ ಪ್ರಭಾರಿ ಜಿಲ್ಲಾ ಉಸ್ತುವಾರಿಗಳಾದ ಉಜ್ವಲ್ ಕುಮಾರ್ ಘೋಷ್ ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಸೆಪ್ಟೆಂಬರ್ 08ರ ಮಂಗಳವಾರ ದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಹತ್ವಾಕಾಂಕ್ಷೆ ಜಿಲ್ಲೆ ಹಾಗೂ ಬ್ಲಾಕ್ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯದ ಮಹತ್ವಾಕಾಂಕ್ಷೆ ಜಿಲ್ಲೆಯೆಂದು ಗುರುತಿಸಿಕೊಂಡಿರುವ ರಾಯಚೂರು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡುವ ಮೂಲಕ ನಿರೀಕ್ಷಿತ ಗುರಿ ತಲುಪಬೇಕು. ಈ ನಿಟ್ಟನಲ್ಲಿ ಪ್ರತಿಯೊಬ್ಬರೂ ಕಾರ್ಯಪ್ರವೃತ್ತರಾಗಬೇಕು. ಕೃಷಿ ಮತ್ತು ಜಲಸಂಪನ್ಮೂಲ ಯೋಜನೆಯಡಿ ಸಣ್ಣ ನೀರಾವರಿ, ಮಣ್ಣು ಪರೀಕ್ಷೆಗಳನ್ನು ಹೆಚ್ಚಿಸಬೇಕು. ಶಾಲೆಗಳಲ್ಲಿ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆಯನ್ನು ಸಂಬಧಿಸಿದ ಇಲಾಖೆ



ಅಧಿಕಾರಿಗಳೇ ಖಾತ್ರಿಪಡಿಸಿಕೊಳ್ಳಬೇಕು ಎಂದು ಸೂಚಿಸಿದರು.

ಮೂಲಭೂತ ಸೌಕರ್ಯ, ಆರ್ಥಿಕ ಅಭಿವೃದ್ಧಿ, ಶಿಕ್ಷಣ ಮತ್ತು ಆರೋಗ್ಯ ವಲಯದ ಸೂಚ್ಯಂಕ ಗುರಿಯಗಳನ್ನು ತಲುಪಲು ನಿರಂತರ ಮೇಲುಸ್ತುವಾರಿ ಅವಶ್ಯಕತೆಯಿದೆ. ಸಂಬಧಿಸಿದ ಇಲಾಖೆಗಳ ಮುಖ್ಯಸ್ಥರುಗಳು ನಿಗಾವಹಿಸುವುದರ ಜೊತೆಗೆ ಪ್ರಗತಿಯನ್ನು ದಾಖಲಿಸಬೇಕು. ಸೂಚ್ಯಂಕಗಳ ಗುರಿಯಂತೆ ಅನೇಕ ವಲಯಗಳಲ್ಲಿ ಪ್ರಗತಿ ಕುಂಠಿತವಾಗದತೆ ನಿಗದಿತ ಗುರಿ ಸಾಧನೆಗೆ ಆದ್ಯತೆಯಾಗಿ ಕಾರ್ಯನಿರ್ವಹಿಸುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಮಹತ್ವಾಕಾಂಕ್ಷಿ ಕಾರ್ಯಕ್ರಮದ ಕೇಂದ್ರ ಸರಕಾರದ ಪ್ರಭಾರಿ ಜಿಲ್ಲಾ ಉಸ್ತುವಾರಿಗಳು ಸೂಚಿಸಿದರು.

ಮಹತ್ವಾಕಾಂಕ್ಷೆ ಯೋಜನೆಯ ಮಾರ್ಗಸೂಚಿಗಳನ್ನು ಸರಿಯಾಗಿ ಬಳಸಿಕೊಂಡು ಕೃಷಿ, ಆರೋಗ್ಯ, ಶಿಕ್ಷಣ, ಆರ್ಥಿಕ ಸಬಲೀಕರಣದ ಕುರಿತು ಹೆಚ್ಚಿನ ಕಾಳಜಿ ವಹಿಸಬೇಕು. ಪಿಮ್‌ಕೆಎಸ್‌ವೈ ಯೋಜನೆಯೆಡಿಯಲ್ಲಿ ಎಲ್ಲಾ ರೈತರಿಂದ ಬೆಳೆ ವಿಮೆ ಮಾಡಿಸಬೇಕು. ಜನರ ಆರೋಗ್ಯ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು. ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಅರ್ಹರಿಗೆ ತಲುಪಿಸಬೇಕು ಎಂದರು.

ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಕಾರ್ಡ್ಗಳ ನೋಂದಣಿಯಲ್ಲಿ ಜಿಲ್ಲೆಯು ಉತ್ತಮ ಪ್ರಗತಿ ಕಾಣಬೇಕು. ಬಿಪಿಎಲ್ ಪಡಿತರ ಚೀಟಿ ಹೊಂದಿದ ಕುಟುಂಬಗಳಿಗೆ ಈ ಯೋಜನೆ ತುಂಬಾ ಉಪಯುಕ್ತವಾಗಿದ್ದು, ಜನರಲ್ಲಿ ಈ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು. ಅಲ್ಲದೆ ಜಿಲ್ಲೆಯಲ್ಲಿ ಕಡಿಮೆ

ಮೂರನೇಯ ಪುಟಕ್ಕೆ

ಅಪಾಯಕಾರಿ ವಿದ್ಯುತ್ ಕಂಬ ತೆರವು ಇಲ್ಲ: ಜೆಸ್ಕಾಂ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹ



ರಾಯಚೂರು,ಸೆ.08-

ನಗರದ ಮಂಗಳವಾರಪೇಟೆ ಪ್ರದೇಶದಲ್ಲಿರುವ ಹಳೆಯ ಹಾಗೂ ಅಪಾಯಕಾರಿ ಕಬ್ಬಿಣದ ವಿದ್ಯುತ್ ಕಂಬವನ್ನು ತೆರವುಗೊಳಿಸಿ, ಹೊಸ ಕಂಬ ಅಳವಡಿಸುವ ಕಾಮಗಾರಿಯನ್ನು ವಿಳಂಬ ಮಾಡುತ್ತಿರುವ ಜೆಸ್ಕಾಂನ ಸಂಬಂಧಪಟ್ಟ ಕಿರಿಯ ಅಭಿಯಂತರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಎಐಎಂಐಎಂ ರಾಯಚೂರು ನಗರ ಅಧ್ಯಕ್ಷ ಶಬ್ಬೀರ್ ಅಹ್ಮದ್ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರ್ವಜನಿಕರ ಸುರಕ್ಷತೆಗೆ ಅಪಾಯಕಾರಿಯಾಗಿರುವ ಹಳೆಯ ವಿದ್ಯುತ್ ಕಂಬವನ್ನು ತೆರವುಗೊಳಿಸಿ ಹೊಸ ಕಂಬ ಅಳವಡಿಸುವಂತೆ ಜುಲೈ 20ರಂದು ಹಾಗೂ ಆಗಸ್ಟ್ 7ರಂದು ಮನವಿ ಸಲ್ಲಿಸಲಾಗಿದೆ. ಆದರೂ ಇದುವರೆಗೆ ಕಾಮಗಾರಿ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಸರಳವಾದ ಸಾರ್ವಜನಿಕ ಸುರಕ್ಷತಾ ಕಾಮಗಾರಿಯೊಂದನ್ನು 47 ದಿನಗಳಿಗೂ ಹೆಚ್ಚು ಕಾಲ ವಿಳಂಬ ಮಾಡಿರುವುದು ಜೆಸ್ಕಾಂ ಅಧಿಕಾರಿಗಳ ಕರ್ತವ್ಯಲೋಪ ಮತ್ತು ನಿರ್ಲಕ್ಷ್ಯವನ್ನು ತೋರಿಸುತ್ತದೆ.

ಮೂರನೇಯ ಪುಟಕ್ಕೆ

ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ

ಸೆ.11, 12ರಂದು ಪದವಿ ವಿದ್ಯಾರ್ಥಿಗಳಿಗೆ ಪ್ರಬಂಧ, ಭಾಷಣ ಸ್ಪರ್ಧೆ

ರಾಯಚೂರು,ಸೆ.08-

ಪತ್ರಕರ್ತರ ಹಿತಾಸಕ್ತಿ ಹಾಗೂ ಮಾಧ್ಯಮ ಕ್ಷೇತ್ರದ ಬೆಳವಣಿಗೆಗೆ ನಿರಂತರವಾಗಿ ಶ್ರಮಿಸುತ್ತಿರುವ ರಾಯಚೂರು ರಿಪೋರ್ಟರ್ಸ್ ಗಿಲ್ಡ್ (ರಿ.) ಸಂಸ್ಥೆ 25 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಬೆಳ್ಳಿ ಮಹೋತ್ಸವ ಆಚರಿಸುತ್ತಿದೆ. ಇದರ ಅಂಗವಾಗಿ ಪದವಿ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳಿಗಾಗಿ ಸೆ.11 ಮತ್ತು 12ರಂದು ಪ್ರಬಂಧ ಹಾಗೂ ಭಾಷಣ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಯುವಜನತೆಯಲ್ಲಿ ಮಾಧ್ಯಮ ಕ್ಷೇತ್ರದ ಬದಲಾವಣೆ, ಸಾಮಾಜಿಕ ಮಾಧ್ಯಮಗಳ ಪ್ರಭಾವ ಹಾಗೂ ಅವುಗಳಿಂದ ಎದುರಾಗುತ್ತಿರುವ ಸವಾಲುಗಳ ಕುರಿತು ಚಿಂತನೆ ಮತ್ತು ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ.

ಸೆ.11ರಂದು ಪತ್ರಿಕಾ ಭವನದ ಮೇಲ್ಮಹಡಿಯಲ್ಲಿ ಪ್ರಬಂಧ ಸ್ಪರ್ಧೆ ನಡೆಯಲಿದ್ದು, ಮಾಧ್ಯಮಗಳು ಮತ್ತು ಪ್ರಜಾಪ್ರಭುತ್ವ: ಇಂದಿನ ಸವಾಲುಗಳು ಹಾಗೂ ನೈತಿಕತೆ ಎಂಬ ವಿಷಯದ ಮೇಲೆ ವಿದ್ಯಾರ್ಥಿಗಳು ತಮ್ಮ ಅಭಿಪ್ರಾಯಗಳನ್ನು ಮಂಡಿಸಬೇಕು.

ಸೆ.12ರಂದು ಭಾಷಣ ಸ್ಪರ್ಧೆ ನಡೆಯಲಿದ್ದು, ಸಾಮಾಜಿಕ ಮಾಧ್ಯಮಗಳು ಮತ್ತು ಜೆನ್-ಜಿ: ಜಾಗೃತಿಯೋ ಅಥವಾ ಗೊಂದಲವೋ? ಎಂಬ ವಿಷಯವನ್ನು ನೀಡಲಾಗಿದೆ.

ಪ್ರತಿ ಕಾಲೇಜಿನಿಂದ ಪ್ರತಿ ಸ್ಪರ್ಧೆಗೆ ಗರಿಷ್ಠ ನಾಲ್ವರು ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದವರಿಗೆ ₹5,000, ದ್ವಿತೀಯ ಸ್ಥಾನಕ್ಕೆ ₹3,000 ಹಾಗೂ ತೃತೀಯ ಸ್ಥಾನಕ್ಕೆ ₹2,000 ನಗದು ಬಹುಮಾನದೊಂದಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

ಜಿಲ್ಲೆಯ ಪದವಿ ಮಹಾವಿದ್ಯಾಲಯಗಳ ಆಡಳಿತ ಮಂಡಳಿಗಳು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳನ್ನು ಸ್ಪರ್ಧೆಗಳಿಗೆ ಕಳುಹಿಸಿ, ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಸಂಭ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಗಿಲ್ಡ್‌ನ ಅಧ್ಯಕ್ಷ ವಿಜಯ್ ಜಾಗಟಗಲ್ ಹಾಗೂ ಪ್ರಧಾನ ಕಾರ್ಯದರ್ಶಿ ವೆಂಕಟೇಶ ಹೂಗಾರ ಅವರು ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 9148245011 ಸಂಖ್ಯೆಗೆ ಸಂಪರ್ಕಿಸಬಹುದು.

ಪರಿಸರ ಸ್ನೇಹಿ ಗಣೇಶೋತ್ಸವ ಆಚರಣೆಗೆ ಪೂವಿತಾ ಕರೆ

ರಾಯಚೂರು,ಸೆ.08

ಸರ್ಕಾರದ ಆದೇಶದನ್ವಯ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ಮತ್ತು ರಾಸಾಯನಿಕ ಬಣ್ಣ ಲೇಪಿತ ಗಣಪತಿ ವಿಗ್ರಹಗಳ ತಯಾರಿಕೆ, ಸಂಗ್ರಹ, ಮಾರಾಟ ನಿಷೇಧಿಸಲಾಗಿದ್ದು, ಮಣ್ಣು ಅಥವಾ ನೈಸರ್ಗಿಕ ವಸ್ತುಗಳಿಂದ ತಯಾರಿಸಿದ ಪರಿಸರ ಸ್ನೇಹಿ ಗಣೇಶ ಮೂರ್ತಿ ಮಾತ್ರ ಪ್ರತಿಷ್ಠಾಪಿಸಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಸಾರ್ವಜನಿಕರಲ್ಲಿ ಕೋರಿದ್ದಾರೆ.



ರಾಯಚೂರು ಜಿಲ್ಲೆಯಲಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಸಹ ಆಚರಿಸಲಾಗುತ್ತಿರುವ ಗಣೇಶ ಚತುರ್ಥಿ ಹಬ್ಬದ ಸಮಯದಲ್ಲಿ ಗಣೇಶ ವಿಗ್ರಹಗಳ ತಯಾರು, ಸಂಗ್ರಹ, ಮಾರಾಟ ಮತ್ತು ವಿಸರ್ಜನೆಯಿಂದ ಪರಿಸರಕ್ಕೆ ಹಾನಿಯಾಗುವಂತಹ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ವಸ್ತುಗಳು ಮತ್ತು ಲೋಹ ಮಿಶ್ರಿತ (ಆಯಿಲ್ ಪೇಂಟ್) ಬಣ್ಣಗಳನ್ನು ಉಪಯೋಗಿಸುವುದರಿಂದ, ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಇವುಗಳ ಭೌತಿಕ ಹಾಗೂ ರಾಸಾಯನಿಕ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುವುದಲ್ಲದೇ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಅಲ್ಲದೇ ಸಾರ್ವಜನಿಕ ಆರೋಗ್ಯಕ್ಕೆ ಧಕ್ಕೆ ಉಂಟಾಗುತ್ತದೆ. ಆದ್ದರಿಂದ ಗಣೇಶನ ಮೂರ್ತಿಗಳ ವಿಸರ್ಜನೆಯಿಂದ ಕೆರೆ, ಬಾವಿ, ಕೊಳ, ನದಿಗಳಲ್ಲಿನ ನೀರು ಮಾಲಿನ್ಯವಾಗದಂತೆ ಮೇಲ್ವಿಚಾರಣೆ ವಹಿಸುವುದು ಅವಶ್ಯಕ ಹಾಗೂ ಇದಕ್ಕಾಗಿ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ.

ಜಿಲ್ಲೆಯ ನಗರ ಹಾಗೂ ಪಟ್ಟಣ ಮತ್ತು ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿಯೂ ಈ ಬಾರಿಯ ಗೌರಿ-ಗಣೇಶ ಹಬ್ಬದ ಸಮಯದಲ್ಲಿ ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಣೆ ಕುರಿತು ಕೆಳಗಿನಂತೆ ಪಾಲನೆ ಮಾಡಲು ಸಾರ್ವಜನಿಕರಿಗೆ ತಿಳಿಸಿರುತ್ತಾರೆ.

ಸಾರ್ವಜನಿಕರು ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ (ಪಿ.ಓ.ಪಿ)/ ಲೋಹ ಮಿಶ್ರಿತ ಬಣ್ಣ ಲೇಪಿತದಂತಹ ಮೂರ್ತಿಗಳನ್ನು ಬಳಸದೇ ನೈಸರ್ಗಿಕ ಬಣ್ಣಗಳಿಂದ ತಯಾರಿಸಿರುವ ಮಣ್ಣಿನ ಚಿಕ್ಕ ಮೂರ್ತಿಗಳನ್ನು ಖರೀದಿಸಿ ಪೂಜಿಸುವಂತೆ ತಿಳಿಸಲಾಗಿದೆ.

ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿಗಳ ಸ್ಥಾಪನೆಗೆ ಸಂಬಧಪಟ್ಟತೆ, ಗಣೇಶ ಮಂಡಳಿಯವರು ಸ್ಥಳೀಯ ಸಂಸ್ಥೆಗಳು ಮತ್ತು ಪೊಲೀಸ್ ಇಲಾಖೆಯಿಂದ ಅಗತ್ಯ ಪರವಾನಿಗೆ ಪಡೆಯುವ ಮೂಲಕ ಷರತ್ತು ಮತ್ತು ನಿಬಂಧನೆಗಳನ್ನು ಪಾಲನೆ ಮಾಡಲು ತಿಳಿಸಲಾಗಿದೆ.

ಹಬ್ಬದ ಸಂದರ್ಭದಲ್ಲಿ ಪ್ಲಾಸ್ಟಿಕ್ ರಹಿತ ವಸ್ತುಗಳ ಬದಲಿಗೆ ಹೂವು ಪತ್ರೆಗಳಿಂದ ಅಲಂಕರಿಸಿ ಮಣ್ಣಿನ ಗಣೇಶ ಮೂರ್ತಿಯನ್ನು ಪೂಜಿಸುವುದು.

ಗಣೇಶನ ಮೂರ್ತಿಗಳನ್ನು ಸ್ಥಳೀಯ ಸಂಸ್ಥೆಗಳು (ಮುನ್ಸಿ ಪಾಲಿಟಿಗಳು) ಗೊತ್ತುಪಡಿಸಿದ ತಾತ್ಕಾಲಿಕ ಟ್ಯಾಂಕ್/ಕಟ್ಟೆ ಮತ್ತು ಕೊಳಗಳಲ್ಲಿ ಮಾತ್ರ ವಿಸರ್ಜಿಸುವುದು ಮೂರ್ತಿಗಳ ವಿಸರ್ಜನೆಯ ಸಮಯದಲ್ಲಿ ಹೂವು ಹಾಗೂ

ಮೂರನೇಯ ಪುಟಕ್ಕೆ

ಇ-ಕೆವೈಸಿ ಮಾಡಿಸಲು ಸೆಪ್ಟಂಬರ್ 30ಕೊನೆಯ ದಿನ

ರಾಯಚೂರು ಸೆಪ್ಟಂಬರ್ 08

ಪಡಿತರ ಚೀಟಿಯಲ್ಲಿನ ಸದಸ್ಯರ ಇ-ಕೆವೈಸಿಯನ್ನು ಪ್ರತಿ 5 ವರ್ಷಗಳಿಗೊಮ್ಮೆ ಮಾಡಿಸುವುದು ಕಡ್ಡಾಯವಾಗಿ ಮಾಡಬೇಕಾಗಿರುತ್ತದೆ. ಪ್ರಸ್ತುತ ಜಿಲ್ಲೆಯಲ್ಲಿ 05 ವರ್ಷ ಪೂರೈಸಿದ ಎ.ಎ.ವೈ 1,12,639 ಮತ್ತು ಬಿ.ಪಿ.ಎಲ್ 8,37,390 ಒಟ್ಟು 9,50,029 ಫಲಾನುಭಿವಗಳ ಇ-ಕೆವೈಸಿ ಮಾಡಿಸಬೇಕಾಗಿರುವುದರಿಂದ ಫಲಾನುಭವಿಗಳ ಪಟ್ಟಿಯನ್ನು ಈಗಾಗಲೇ ಆಯಾ ತಾಲ್ಲೂಕಿನ ನ್ಯಾಯಬೆಲೆ ಅಂಗಡಿ ಡೀಲರರುಗಳಿಗೆ ನೀಡಲಾಗಿದ್ದು, ಫಲಾನುಭವಿಗಳು ತಮಗೆ ಜೋಡಣೆಯಾದ ನ್ಯಾಯಬೆಲೆ ಅಂಗಡಿಗೆ ಖುದ್ದು ಭೇಟಿ ನೀಡಿ ಕಡ್ಡಾಯವಾಗಿ ಇ-ಕೆವೈಸಿಯನ್ನು ಮಾಡಿಸುವಂತೆ ಕೋರಲಾಗಿದೆ.

ಇ-ಕೆವೈಸಿ ಪ್ರಕ್ರಿಯೆಯು ಉಚಿತವಾಗಿದ್ದು, ಇದಕ್ಕೆ ಯಾವುದೇ ಶುಲ್ಕ ಪಾವತಿಸುವಂತಿಲ್ಲ. ಸೆಪ್ಟೆಂಬರ್ 30 ಕೊನೆಯ ದಿನವಾಗಿರುತ್ತದೆ.

ಜಿಲ್ಲೆಯ ನ್ಯಾಯಬೆಲೆ ಅಂಗಡಿಗಳಲ್ಲಿ ಲಭ್ಯ ಪಟ್ಟಿಯಲ್ಲಿರುವ ಪಡಿತರ ಚೀಟಿದಾರರು ಮಾತ್ರ ಇ-ಕೆವೈಸಿ ಮಾಡಿಸಲು ಈ ಮೂಲಕ ತಿಳಿಸಿದೆ.


ಒಂದು ವೇಳೆ ಫಲಾನುಭವಿಗಳು ಇ-ಕೆವೈಸಿ ಮಾಡಿಸದೆ ಇದ್ದಲ್ಲಿ ಮುಂದಿನ ದಿನಗಳಲ್ಲಿ ಪಡಿತರ ಚೀಟಿಯಲ್ಲಿ ಅಂತಹ ಫಲಾನುಭವಿಗಳ ಹೆಸರನ್ನು ತೆಗೆಯಲು ಕ್ರಮವಹಿಸಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಡಾವಣೆಯ ಜನರ ಸಮಸ್ಯೆ ಆಲಿಸಿದ ರವಿ ಬೋಸರಾಜು

ಸ್ವಚ್ಛತೆ ಕಾಪಾಡಲು ಸಾರ್ವಜನಿಕರಿಗೆ ರವಿ ಬೋಸರಾಜು ಕರೆ

ರಾಯಚೂರು,ಸೆ.08-

ಸ್ವಚ್ಛ ಹಾಗೂ ಸುಂದರ ನಗರ ನಿರ್ಮಾಣಕ್ಕೆ ಸಾರ್ವಜನಿಕರ ಸಹಕಾರ ಅತ್ಯಗತ್ಯ. ಪ್ರತಿಯೊಬ್ಬರೂ ತಮ್ಮ ಮನೆ ಹಾಗೂ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಕಸವನ್ನು ಎಲ್ಲೆಂದರಲ್ಲಿ ಹಾಕದೆ, ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡುವ ಮೂಲಕ ನಗರ ಸ್ವಚ್ಛತೆಗೆ ಕೈಜೋಡಿಸಬೇಕು ಎಂದು ಕಾಂಗ್ರೆಸ್ ರಾಜ್ಯ ಯುವ ಮುಖಂಡರಾದ ರವಿ ಬೋಸರಾಜು ಅವರು ಮನವಿ ಮಾಡಿದರು.



ನಗರದ ವಾರ್ಡ್ ನಂ. 7 ಮತ್ತು 8ರ ಟಿಪ್ಪು ಸುಲ್ತಾನ್ ರಸ್ತೆ ಬಡಾವಣೆಗೆ ಕಾಂಗ್ರೆಸ್ ರಾಜ್ಯ ಯುವ ಮುಖಂಡ ರವಿ ಬೋಸರಾಜು ಅವರು ಭೇಟಿ ನೀಡಿ, ಸ್ವಚ್ಛತೆ ಹಾಗೂ ಮೂಲಸೌಕರ್ಯಗಳ ಸಮಸ್ಯೆಗಳ ಕುರಿತು ಪರಿಶೀಲನೆ ನಡೆಸಿದರು.

ನಗರದ ವಿವಿಧ ಬಡಾವಣೆಯ ಪ್ರದೇಶಗಳಿಗೆ ತೆರಳಿ ಸ್ಥಳೀಯ ನಿವಾಸಿಗಳೊಂದಿಗೆ ಚರ್ಚಿಸಿದ ಅವರು, ಸ್ವಚ್ಛತೆ, ರಸ್ತೆ, ಒಳಚರಂಡಿ ಹಾಗೂ ಕುಡಿಯುವ ನೀರಿಗೆ ಸಂಬಂಧಿ ಸಿದ ಸಮಸ್ಯೆಗಳ ಕುರಿತು ಮಾಹಿತಿ ಪಡೆದುಕೊಂಡರು. ಸಾರ್ವ ಜನಿಕರು ತಮ್ಮ ಸಮಸ್ಯೆಗಳನ್ನು ಕಾಂಗ್ರೆಸ್ ರಾಜ್ಯ ಯುವ ಮುಖಂಡರಾದ ರವಿ ಬೋಸರಾಜು ಅವರ ಗಮನಕ್ಕೆ ತಂದರು. ಬಡಾವಣೆಯ ರಸ್ತೆ, ಒಳಚರಂಡಿ ಹಾಗೂ ಕುಡಿಯುವ ನೀರಿನ ಸಮಸ್ಯೆಗಳನ್ನು ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದು, ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸುವುದಾಗಿ ರವಿ ಬೋಸರಾಜು ತಿಳಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ನರಸಿಂಹಲು ಮಾಡಗಿರಿ, ವಾಹೀದ್, ಅಲಿ, ಅತೀಖ್ ರಾಮನಗೌಡ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

108 ಆಂಬುಲೆನ್ಸ್ ನೌಕರರ ಮುಷ್ಕರ : ಸೆ.20ರಿಂದ ಸಾಮೂಹಿಕ ರಾಜೀನಾಮೆ ಎಚ್ಚರಿಕೆ

ಬೆಂಗಳೂರು, ಸೆ.8-

ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಆರೋಗ್ಯ ಕವಚ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ 108 ಆಂಬುಲೆನ್ಸ್ ನೌಕರರು ಮುಷ್ಕರದ ಎಚ್ಚರಿಕೆ ನೀಡಿದ್ದಾರೆ.

ಬೇಡಿಕೆಗಳನ್ನು ಈಡೇರಿಸಲು ರಾಜ್ಯ ಸರ್ಕಾರಕ್ಕೆ 15 ದಿನಗಳ ಗಡುವು ನೀಡಿರುವ ನೌಕರರ ಸಂಘಟನೆಗಳು, ಈ ಅವಧಿಯಲ್ಲಿ ಬೇಡಿಕೆಗಳು ಈಡೇರದಿದ್ದರೆ ಸೆ.20 ರಿಂದ ಸಾಮೂಹಿಕ ರಾಜೀನಾಮೆ ನೀಡಿ ಹೋರಾಟ ನಡೆಸುವುದಾಗಿ ಎಚ್ಚರಿಸಿವೆ.

ಈ ಸಂಬಂಧ ಸುವರ್ಣ ಕರ್ನಾಟಕ ಆರೋಗ್ಯ ಕವಚ-108 ನೌಕರರ ಸಂಘ ಹಾಗೂ ಕರ್ನಾಟಕ ರಾಜ್ಯ ಆರೋಗ್ಯ ಕವಚ ಆಂಬುಲೆನ್ಸ್ ನೌಕರರ ಸಂಘದ ಪದಾಧಿಕಾರಿಗಳು ಆರೋಗ್ಯ ಸಚಿವರು ಹಾಗೂ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಪತ್ರ ಬರೆದು ತಮ್ಮ ಬೇಡಿಕೆಗಳನ್ನು ಸಲ್ಲಿಸಿದ್ದಾರೆ.

ಜಿವಿಕೆ ಸಂಸ್ಥೆಯ ಅಧೀನದಲ್ಲಿ ಸುಮಾರು 35,000 ನೌಕರರು ಕಾರ್ಯನಿರ್ವಹಿಸುತ್ತಿದ್ದು, ಹಲವು ವರ್ಷಗಳಿಂದ ತಮ್ಮ ಬೇಡಿಕೆಗಳ ಈಡೇರಿಕೆಗೆ ಸರ್ಕಾರ ಸ್ಪಂದಿಸಿಲ್ಲ ಎಂದು ನೌಕರರು ಆರೋಪಿಸಿದ್ದಾರೆ. ನೇಮಕಾತಿ ಸಂದರ್ಭದಲ್ಲಿ ನೀಡಿದ್ದ ಭರವಸೆಯಂತೆ ಪ್ರತಿ ವರ್ಷ ವೇತನ ಪರಿಷ್ಕರಣೆ ಮಾಡಬೇಕಾಗಿತ್ತು. ಆದರೆ, 2017ರಿಂದ 2022ರವರೆಗೆ

ಮೂರನೇಯ ಪುಟಕ್ಕೆ

ಸ್ವಾಮಿನಾಥನ್ ಆಯೋಗದ ವರದಿ ಜಾರಿಗೊಳಿಸಲು ಆಗ್ರಹ

ಅಫಜಲಪುರ, ಸೆ.8-

ಟನ್ ಕಬ್ಬಿಗೆ 5,000 ರೂ. ಬೆಂಬಲ ಬೆಲೆ ನಿಗದಿ ಪಡಿಸುವುದು, ಸ್ವಾಮಿನಾಥನ್ ಆಯೋಗದ ವರದಿ ಜಾರಿಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಸ್ವಾಭಿಮಾನಿ ಕಬ್ಬು ಬೆಳೆಗಾರರ ಐಕ್ಯ ಹೋರಾಟ ಸಮಿತಿ ಹಾಗೂ ಕರ್ನಾಟಕ ಕಬ್ಬು ಬೆಳೆಗಾರರ ಸಂಘದ ಅಫಜಲಪುರ ತಾಲೂಕು ಘಟಕದ ವತಿಯಿಂದ ಸೋಮವಾರ ಪಟ್ಟಣದ ಶೆಟ್ಟಿ ಫಂಕ್ಷನ್ ಹಾಲ್‌ನಲ್ಲಿ ಕಬ್ಬು ಬೆಳೆಗಾರರ ಸಮ್ಮೇಳನ ನಡೆಯಿತು. ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಕಬ್ಬು ಬೆಳೆಗಾರರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್.ಎಲ್. ಭರತರಾಜ, ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಸಕ್ಕರೆ ಉದ್ಯಮಿಗಳ ಪರವಾಗಿ ಆಡಳಿತ ನಡೆಸುತ್ತಿರುವುದರಿಂದ ಕಬ್ಬು ಬೆಳೆಗಾರರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಆರೋಪಿಸಿದರು.

ಒಂದು ಟನ್ ಕಬ್ಬಿನಿಂದ ಸಕ್ಕರೆ, ಎಥನಾಲ್, ಬಗಾಸ್, ಕಾಕಂಬಿ, ಕೊಜೆನ್, ಡಿಸ್ಟಿಲರಿ, ಪ್ರೆಸ್‌ಮಡ್ ಹಾಗೂ ಬಯೋ ಕಾಂಪೋಸ್ಟ್ ಸೇರಿದಂತೆ ವಿವಿಧ ಉಪ ಉತ್ಪನ್ನಗಳಿಂದ 13 ರೂ. ನಿಂದ 14 ಸಾವಿರ ರೂ.ವರೆಗೆ ಆದಾಯ ಬರುತ್ತದೆ. ಆದರೆ ರೈತರಿಗೆ ಮಾತ್ರ ನ್ಯಾಯಯುತ ಬೆಲೆ ದೊರೆಯುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.



ಕಬ್ಬಿನಿಂದ ಉತ್ಪಾದನೆಯಾಗುವ ಸ್ಪಿರಿಟ್‌ನಿಂದ ಸರ್ಕಾರಕ್ಕೆ ಭಾರಿ ಪ್ರಮಾಣದ ಅಬಕಾರಿ ಆದಾಯ ಬರುತ್ತಿದ್ದರೂ, ಕಬ್ಬು ಬೆಳೆಗಾರರ ಹಿತಾಸಕ್ತಿಯನ್ನು ನಿರ್ಲಕ್ಷಿಸಲಾಗುತ್ತಿದೆ ಎಂದು ದೂರಿದರು. 202223ನೇ ಸಾಲಿನ ರಾಜ್ಯ ಸಲಹಾ ಬೆಲೆ ()ಯನ್ನು ಸಮರ್ಪಕವಾಗಿ ಜಾರಿಗೊಳಿಸಿಲ್ಲ. ತಮಿಳುನಾಡು, ಹರಿಯಾಣ ಮತ್ತು ಪಂಜಾಬ್ ರಾಜ್ಯಗಳ ಮಾದರಿಯಲ್ಲಿ ಕರ್ನಾಟಕದಲ್ಲೂ ಪ್ರತಿ ಟನ್ ಕಬ್ಬಿಗೆ 500 ರೂ. ಎಸ್‌ಎಪಿ ನಿಗದಿಪಡಿಸಬೇಕು. ಕೇಂದ್ರ ಸರ್ಕಾರ ಎಫ್‌ಆರ್‌ಪಿಯನ್ನು ಕೇವಲ 100 ರೂ. ಹೆಚ್ಚಿಸಿರುವುದು ರೈತರಿಗೆ ಅನ್ಯಾಯವಾಗಿದೆ ಎಂದು ಹೇಳಿದರು.

ಕರ್ನಾಟಕ ಪ್ರಾಂತ ರೈತ ಸಂಘದ ಅಧ್ಯಕ್ಷ ಶ್ರೀಮಂತ ಬಿರಾದಾರ ಮಾತನಾಡಿ, ಅಫಜಲಪುರ ತಾಲೂಕು ಸಂಪೂರ್ಣ ನೀರಾವರಿಯಾಗುವವರೆಗೆ ಹೋರಾಟ ಮುಂದುವರಿಯಲಿದೆ ಎಂದರು. ಕೆರೆಗಳನ್ನು ಹೂಳೆತ್ತಿ ಪುನಶ್ಚೇತನಗೊಳಿಸಬೇಕು. ಅವೈಜ್ಞಾನಿಕ ಕೆರೆ ತುಂಬುವ ಯೋಜನೆಯನ್ನು ಮರುಪರಿಶೀಲಿಸಿ ವೈಜ್ಞಾನಿಕವಾಗಿ ಜಾರಿಗೊಳಿಸಬೇಕು. ಕಾಲುವೆಗಳಿಗೆ ಕಾಡಾ ಗೇಟ್‌ಗಳನ್ನು ಅಳವಡಿಸಿ ತಾಲೂಕಿನ ಎಲ್ಲ ಗ್ರಾಮಗಳಿಗೂ ಸಮರ್ಪಕವಾಗಿ ನೀರು ತಲುಪಿಸುವ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ಏತ ನೀರಾವರಿ ಯೋಜನೆಯ ಕಾರ್ಯನಿರ್ವಾಹಕ ಅಧಿಕಾರಿ ಶಿವಕುಮಾರ ಮಾತನಾಡಿ, ಕಾಲುವೆಗಳಿಗೆ ಕಾಡಾ ಗೇಟ್ ಅಳವಡಿಸುವ ಸಿದ್ಧತೆ ಪೂರ್ಣಗೊಂಡಿದ್ದು, ಕೆಲವೇ ದಿನಗಳಲ್ಲಿ ಸಮಸ್ಯೆ ಬಗೆಹರಿಯಲಿದೆ ಎಂದು ಭರವಸೆ ನೀಡಿದರು.

ಕಬ್ಬು ಬೆಳೆಗಾರರ ಸಂಘದ ತಾಲೂಕು ಅಧ್ಯಕ್ಷ ಶಾಂತು ಅಂಜುಟಗಿ ಹಾಗೂ ಸ್ವಾಭಿಮಾನಿ ಹೋರಾಟ ಸಮಿತಿ ಅಧ್ಯಕ್ಷ ರಮೇಶ್ ಶೆಟ್ಟಿ ಮಾತನಾಡಿ, ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚಕ್ಕೆ ಸಂಬಂಧಿಸಿದಂತೆ ಕಾರ್ಖಾನೆ ಹಾಗೂ ರೈತರ ನಡುವೆ ದ್ವಿಪಕ್ಷೀಯ ಸಮಿತಿ ರಚಿಸಬೇಕು. ಕಬ್ಬಿನ ತೂಕ ಮತ್ತು ಸಕ್ಕರೆ ಇಳುವರಿಯಲ್ಲಿ ನಡೆಯುತ್ತಿರುವ ಅಕ್ರಮಗಳನ್ನು ತಡೆಯಲು ರೈತರನ್ನೊಳಗೊಂಡ ತಾಂತ್ರಿಕ ಸಮಿತಿ ರಚಿಸಬೇಕು ಎಂದು ಆಗ್ರಹಿಸಿದರು.

ಸಮ್ಮೇಳನದ ಅಧ್ಯಕ್ಷತೆಯನ್ನು ಚಿದಾನಂದ ಮಠ ವಹಿಸಿದ್ದರು. ಭೀಮಾ ನದಿ ನೀರಾವರಿ ಹೋರಾಟ ಸಮಿತಿಯ ಪಂಚಪ್ಪ ಕಲಬುರಗಿ ಸಮ್ಮೇಳನ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಕಬ್ಬು ಬೆಳೆಗಾರರ ಸಂಘದ ಮುಖಂಡ ಗುರು ಚಾಂದಕೋಟೆ, ನೀರಾವರಿ ಸಮಿತಿ ಅಧ್ಯಕ್ಷ ರಮೇಶ್ ಪಾಟೀಲ, ಕಸಾಪ ಅಧ್ಯಕ್ಷೆ ಪ್ರಭಾವತಿ ಮೇತ್ರೆ, ನಾಮದೇವ ಕಡಕೋಳ, ನೂರಾಹ್ಮದ ಭಾಗವಾನ, ಲತೀಫ್ ಪಟೇಲ್, ಮಹಿಬೂಬ ನದಾಫ್, ಬಸವರಾಜ ಘಾಣೂರ, ಭೀಮರಾಯ ತಳವಾರ, ಸಂಜೀವ ಶಿವೂರ, ಸೋಮಶೇಖರ ರೇವೂರ, ಶರಣು ದಿವಾಣಜಿ, ಶರಣಗೌಡ ಕರಿಗೌಡ, ರಾಜುಗೌಡ ಬಾಸಗಿ, ಬಸವರಾಜ ಕಲಶೆಟ್ಟಿ, ಮುರುಗೇಂದ್ರ ಮಸಳಿ, ಸಿದ್ದರಾಮ ಶಿರಸಿಗಿ, ಅಪ್ಪಸಾಹೇಬ ಪಾಣೆಗಾರ ಸೇರಿದಂತೆ ಅನೇಕ ರೈತರು ಉಪಸ್ಥಿತರಿದ್ದರು. ಶಿಕ್ಷಕಿ ಚಿತ್ರಕಲಾ ಪಾಟೀಲ ನಿರೂಪಿಸಿ, ವಂದಿಸಿದರು.

ಕಾಡುಹಂದಿ ದಾಳಿಗೆ ಮೃತಪಟ್ಟ ರೈತ ಕುಟುಂಬಕ್ಕೆ 20 ಲಕ್ಷ ರೂ. ಪರಿಹಾರ ಚೆಕ್ ವಿತರಣೆ

ಬೀದರ್,ಸೆ.08-

ಭಾಲ್ಕಿ ತಾಲೂಕಿನ ಆನಂದವಾಡಿ ಗ್ರಾಮದಲ್ಲಿ ಕಾಡುಹಂದಿ ದಾಳಿಯಿಂದ ಗಾಯಗೊಂಡು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟ ರೈತ ಚನ್ನಬಸಪ್ಪ ಭೂರೇ ಅವರ ಕುಟುಂಬಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ, ಸೋಮವಾರ 20 ಲಕ್ಷ ಪರಿಹಾರದ ಚೆಕ್ ಹಸ್ತಾಂತರಿಸಿದರು.

ಮೃತ ರೈತನ ನಿವಾಸಕ್ಕೆ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದ ಸಚಿವರು, ಅರಣ್ಯ ಇಲಾಖೆಯಿಂದ ಮಂಜೂರಾದ ಪರಿಹಾರದ ಚೆಕ್‌ನ್ನು ಕುಟುಂಬಕ್ಕೆ ವಿತರಿಸಿದರು.

ಈ ವೇಳೆ ಮಾತನಾಡಿದ ಅವರು, ಪರಿಹಾರದಿಂದ ಕಳೆದುಹೋದ ಜೀವವನ್ನು ಮರಳಿ ತರಲು ಸಾಧ್ಯವಿಲ್ಲ. ಆದರೆ ದುಃಖದಲ್ಲಿರುವ ಕುಟುಂಬಕ್ಕೆ ಸರ್ಕಾರದ ನೆರವು ಆಸರೆಯಾಗಲಿದೆ. ಸಂಕಷ್ಟದ ಸಮಯದಲ್ಲಿ ಸರ್ಕಾರ



ಕುಟುಂಬದೊಂದಿಗೆ ನಿಂತಿದೆ ಎಂದು ಹೇಳಿದರು.

ಕಾಡುಪ್ರಾಣಿಗಳ ದಾಳಿಯಿಂದ ರೈತರು ಹಾಗೂ ಗ್ರಾಮೀಣ ಜನರಿಗೆ ಆಗುತ್ತಿರುವ ತೊಂದರೆಗಳನ್ನು ತಡೆಯಲು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗ್ರಾಮೀಣ ಪ್ರದೇಶಗಳಲ್ಲಿ ಕಾಡುಪ್ರಾಣಿಗಳ ಹಾವಳಿ ನಿಯಂತ್ರಿಸಿ ರೈತರ ಸುರಕ್ಷತೆಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಈ ಸಂದರ್ಭದಲ್ಲಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ವಸಂತ್ ರೆಡ್ಡಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸುಮಿತ್ ಪಾಟೀಲ್, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಚಂದ್ರಕಾಂತ್ ಹೇಮ್ಮಾ, ವಲಯ ಅರಣ್ಯಾಧಿಕಾರಿ ಸಚಿನ್ ಪಾಟೀಲ್, ಉಪ ವಲಯ ಅರಣ್ಯಾಧಿಕಾರಿ ಶಾಂತಕುಮಾರ್ ಪಾಟೀಲ್ ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು, ಸ್ಥಳೀಯ ಮುಖಂಡರು, ಪಕ್ಷದ ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.



ಔರಾದ್, ಕಮಲನಗರ ತಾಲೂಕುಗಳನ್ನು ಬರಗಾಲ ಪಟ್ಟಿಗೆ ಸೇರಿಸಲು ಆಗ್ರಹಿಸಿ ರೈತರಿಂದ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ

ಬೀದರ್,ಸೆ.08-

ಶ್ರಾವಣ ಮಾಸದ ಪೂಜೆಗೆ ತೆಂಗಿನಕಾಯಿ ಕೀಳಲು ಹೋದ ಯುವಕನಿಗೆ ವಿದ್ಯುತ್ ಸ್ಪರ್ಶಿಸಿ ಗಂಭೀರವಾಗಿ ಗಾಯಗೊಂಡ ಘಟನೆ ಬೀದರ್ ಜಿಲ್ಲೆಯ ಸುಲ್ತಾನಪೂರ್ ಗ್ರಾಮದಲ್ಲಿ ನಡೆದಿದೆ.

ಸುಲ್ತಾನಪೂರ್ ಗ್ರಾಮದ ಭಗವಂತ್ (18) ಗಾಯಗೊಂಡ ಯುವಕ. ಹನುಮಾನ ದೇವಸ್ಥಾನದ ಆವರಣದಲ್ಲಿ ನಡೆಯುತ್ತಿದ್ದ ಶ್ರಾವಣ ಮಾಸದ ಪೂಜಾ ಹಾಗೂ ಸ್ವಚ್ಛತಾ ಕಾರ್ಯಗಳಿಗಾಗಿ ಅಗತ್ಯವಿದ್ದ ತೆಂಗಿನಕಾಯಿಗಳನ್ನು ಕೀಳಲು ಆತ ತೆಂಗಿನ ಮರ ಏರಿದ್ದನು.

ತೆಂಗಿನಕಾಯಿಗಳನ್ನು ಕೆಳಗಿಳಿಸಲು ಭಗವಂತ್ ಕಬ್ಬಿಣದ ರಾಡ್ ಬಳಸುತ್ತಿದ್ದ ವೇಳೆ, ಸಮೀಪದಲ್ಲೇ ಹಾದು ಹೋಗಿದ್ದ ವಿದ್ಯುತ್ ತಂತಿಗೆ ಆಕಸ್ಮಿಕವಾಗಿ ರಾಡ್ ತಗುಲಿದೆ.

ಇದರಿಂದ ವಿದ್ಯುತ್ ಪ್ರವಹಿಸಿ ಯುವಕನಿಗೆ ತೀವ್ರ ವಿದ್ಯುತ್ ಸ್ಪರ್ಶವಾಗಿದೆ.

ಘಟನೆ ಗಮನಿಸಿದ ಗ್ರಾಮಸ್ಥರು ತಕ್ಷಣವೇ ಯುವಕನನ್ನು ರಕ್ಷಿಸಿ ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ನೀಡಲಾಗುತ್ತಿದೆ.

ಈ ಅವಘಡದ ಬಳಿಕ ದೇವಸ್ಥಾನದ ಆವರಣದ ಸಮೀಪದಿಂದ ಹಾದು ಹೋಗಿರುವ ವಿದ್ಯುತ್ ಕಂಬಗಳು ಹಾಗೂ ತಂತಿಗಳನ್ನು ತಕ್ಷಣ ಸ್ಥಳಾಂತರಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ದಲಿತರ ಮೇಲಿನ ದೌರ್ಜನ್ಯ ಖಂಡಿಸಿ ದಲಿತ ಸಂಘಟನೆಗಳ ಒಕ್ಕೂಟದಿಂದ ಬೃಹತ್ ಪ್ರತಿಭಟನೆ

ಬೀದರ್,ಸೆ.08-

ಜಿಲ್ಲಾದ್ಯಂತ ದಲಿತರ ಮೇಲೆ ನಡೆಯುತ್ತಿರುವ ದೌರ್ಜನ್ಯ, ಹಲ್ಲೆ, ಕೊಲೆ ಹಾಗೂ ಜಾತಿ ನಿಂದನೆ ಪ್ರಕರಣಗಳನ್ನು ಖಂಡಿಸಿ ದಲಿತ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ಸೋಮವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು. ಶಹಾಗಂಜ್ ಬೌದ್ಧ ವಿಹಾರದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ಬಸವೇಶ್ವರ ವೃತ್ತ, ಭಗತ್ ಸಿಂಗ್ ವೃತ್ತ, ತಹಶೀಲ್ದಾರ್ ಕಚೇರಿ ಹಾಗೂ ಶಿವಾಜಿ ವೃತ್ತದ ಮೂಲಕ ಅಂಬೇಡ್ಕರ್ ವೃತ್ತ ತಲುಪಿತು. ಮೆರವಣಿಗೆಯುದ್ದಕ್ಕೂ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ವಿರುದ್ಧ ಪ್ರತಿಭಟನಾಕಾರರು ಘೋಷಣೆಗಳನ್ನು ಕೂಗಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಜನರ ಧ್ವನಿ ಸಂಘಟನೆಯ ಸಂಸ್ಥಾಪಕ ಅಂಕುಶ್ ಗೋಖಲೆ, ಕಳೆದ ಎರಡು ವರ್ಷಗಳಿಂದ ಜಿಲ್ಲೆಯಲ್ಲಿ ದಲಿತರ ಮೇಲೆ ನಿರಂತರವಾಗಿ ಹಲ್ಲೆ, ಕೊಲೆ ಹಾಗೂ ಜಾತಿ ನಿಂದನೆ ಪ್ರಕರಣಗಳು ನಡೆಯುತ್ತಿದ್ದು, ಭಾಲ್ಕಿ ತಾಲೂಕಿನಲ್ಲಿ ಇಂತಹ ಘಟನೆಗಳು ಹೆಚ್ಚಾಗಿವೆ ಎಂದು ಆರೋಪಿಸಿದರು.

ಚಳಕಾಪುರ ಹಾಗೂ ರಾಚಪ್ಪ ಗೌಡಗಾಂವ್ ಗ್ರಾಮಗಳ ಘಟನೆಗಳನ್ನು ಉಲ್ಲೇಖಿಸಿದ ಅವರು, ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಪೊಲೀಸ್ ಇಲಾಖೆ ಸಮರ್ಪಕ ಕ್ರಮ ಕೈಗೊಳ್ಳುತ್ತಿಲ್ಲ ಎಂದು ದೂರಿದರು. ಹೋರಾಟಗಾರರ ವಿರುದ್ಧ ಮಾತನಾಡುವ ಕೆಲ ದಲಿತ ಮುಖಂಡರನ್ನೂ ಟೀಕಿಸಿದ ಅವರು, ಸಮಾಜದ ಹಿತಾಸಕ್ತಿಗೆ ವಿರುದ್ಧವಾಗಿ ನಡೆದುಕೊಳ್ಳಬಾರದು ಎಂದು ಹೇಳಿದರು.

ಹಿರಿಯ ಹೋರಾಟಗಾರ ವೈಜೀನಾಥ್ ಸೂರ್ಯವಂಶಿ ಮಾತನಾಡಿ, ಜಿಲ್ಲೆಯಲ್ಲಿ ದಲಿತರ ಮೇಲಿನ ದೌರ್ಜನ್ಯ



ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಒಕ್ಕೂಟದ ಅಧ್ಯಕ್ಷ ವಿನೋದ್ ರತ್ನಾಕರ್ ಮಾತನಾಡಿ, ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಮುಚ್ಚಿಹಾಕುವ ಪ್ರಯತ್ನಗಳು ನಡೆದಿವೆ ಎಂದು ಆರೋಪಿಸಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರ ವಿರುದ್ಧ ತನಿಖೆ ನಡೆಸಿ ಅಮಾನತು ಮಾಡಬೇಕು ಎಂದು ಒತ್ತಾಯಿಸಿದರು.

ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗೆ ಸಲ್ಲಿಸಿದ ಮನವಿಯಲ್ಲಿ, ಬೀದರ್ ಜಿಲ್ಲೆಯಲ್ಲಿ ಡಿಜಿಪಿ ಮತ್ತು ಐಜಿಪಿ ನೇತೃತ್ವದಲ್ಲಿ ಉನ್ನತ ಮಟ್ಟದ ಪೊಲೀಸ್ ತನಿಖಾ ಸಮಿತಿ ರಚಿಸಬೇಕು, ಕಳೆದ ಐದು ವರ್ಷಗಳ ಎಸ್ಸಿ -ಎಸ್ಟಿ ದೌರ್ಜನ್ಯ ತಡೆ ಕಾಯ್ದೆಯಡಿ ದಾಖಲಾಗಿರುವ ಪ್ರಕರಣಗಳ ಸಮಗ್ರ ಪರಿಶೀಲನೆ ನಡೆಸಬೇಕು ಹಾಗೂ ಸಂತ್ರಸ್ತರು ಮತ್ತು ಸಾಕ್ಷಿಗಳಿಗೆ ಸೂಕ್ತ ರಕ್ಷಣೆ ನೀಡಬೇಕು ಎಂದು ಆಗ್ರಹಿಸಲಾಗಿದೆ.

ಬೆಳಕುಣಿ ಪ್ರಕರಣದಲ್ಲಿ ಹೋರಾಟಗಾರರ ವಿರುದ್ಧ ದಾಖಲಿಸಿರುವ ಪ್ರಕರಣಗಳನ್ನು ಮರುಪರಿಶೀಲಿಸಬೇಕು. ಬಡವರು ಹಾಗೂ ದಲಿತರ ಭೂಮಿಗೆ ಸಂಬಂಧಿಸಿದ ದೂರುಗಳನ್ನು ತನಿಖೆ ನಡೆಸಿ, 30 ದಿನಗಳೊಳಗೆ ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ ಲಿಖಿತ ಮಾಹಿತಿ ನೀಡಬೇಕು ಎಂದು ಒಕ್ಕೂಟ ಮನವಿ ಮಾಡಿದೆ.

ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ರಾಜಕುಮಾರ್ ಮೂಲಭಾರತಿ, ಕಪಿಲ್ ಗೋಡಬೋಲೆ, ರಾಹುಲ್ ಖಂದಾರೆ, ರವಿಕುಮಾರ್ ವಾಘಮಾರೆ, ರಾಹುಲ್ ದಲಾಲೆ, ಗೌತಮ್ ಚವ್ಹಾಣ, ಪ್ರದೀಪ್ ಭಾವಿಕಟ್ಟಿ, ರಾಜಕುಮಾರ್ ಸಿಂಧೆ, ಅಂಬಾದಾಸ್ ಚಕ್ರವರ್ತಿ, ಶಕ್ತಿಕಾಂತ್ ಭಾವಿದೊಡ್ಡಿ, ಜ್ಞಾನೇಶ್ವರ್ ಸಿಂಗಾರೆ, ಮಹೇಶ್ ಭೋಲಾ, ರವಿ ಭೂಸಂಡೆ, ರಾಜಕುಮಾರ್ ಗುನ್ನಳ್ಳಿ, ಪ್ರಕಾಶ್ ಹಳ್ಳಿಖೇಡ್, ಹರ್ಷಿತ್ ದಾಂಡೇಕರ್, ಮಲ್ಲಿಕಾರ್ಜುನ್ ಕೌಠಾ, ವಿಲಾಸ್ ಎ.ಮೋರೆ, ಗೌತಮ್ ಬಗದಲ್, ಬಸವರಾಜ್ ಮೇತ್ರೆ ಸೇರಿದಂತೆ ನೂರಾರು ಮಹಿಳೆಯರು ಮತ್ತು ಇತರರು ಭಾಗವಹಿಸಿದ್ದರು.

ಅನುದಾನ ರಹಿತ ಕನ್ನಡ ಮಾಧ್ಯಮ ಶಾಲೆಗಳಿಗೆ ನೆರವು ನೀಡುವಂತೆ ಆಗ್ರಹಿಸಿ ಸೆ.9 ರಿಂದ ಅನಿರ್ದಿಷ್ಟಾವಧಿ ಧರಣಿ



ಬೀದರ್ ಸೆ. 8-

ಕಲ್ಯಾಣ ಕರ್ನಾಟಕ ಭಾಗದ ಅನುದಾನ ರಹಿತ ಕನ್ನಡ ಮಾಧ್ಯಮ ಖಾಸಗಿ ಶಾಲೆಗಳ ಸಮಸ್ಯೆಗಳನ್ನು ಬಗೆಹರಿಸಿ, ಕೆಕೆಆರ್‌ಡಿಬಿ ಅನುದಾನದಡಿ ನೆರವು ನೀಡುವಂತೆ ಆಗ್ರಹಿಸಿ ಕಲ್ಯಾಣ ಕರ್ನಾಟಕದ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟವು ಸೆಪ್ಟೆಂಬರ್ 9ರಿಂದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಕಚೇರಿ ಎದುರು ಅನಿರ್ದಿಷ್ಟಾವಧಿ ಸಾಂಕೇತಿಕ ಧರಣಿ ಸತ್ಯಾಗ್ರಹ ನಡೆಸಲು ತೀರ್ಮಾನಿಸಿದೆ.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ವಿಭಾಗೀಯ ಅಧ್ಯಕ್ಷ ಸುನಿಲ್ ಹುಡಗಿ, ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ಖಾಸಗಿ ಶಿಕ್ಷಣ ಸಂಸ್ಥೆಗಳ ಪ್ರತಿನಿಧಿಗಳು ಹೋರಾಟದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಯಾವುದೇ ಘೋಷಣೆ ಅಥವಾ ಗದ್ದಲವಿಲ್ಲದೆ ವಚನಗಳು ಹಾಗೂ ತತ್ವಪದಗಳನ್ನು ಹಾಡುವ ಮೂಲಕ ವಿಶಿಷ್ಟ ರೀತಿಯಲ್ಲಿ ಸತ್ಯಾಗ್ರಹ ನಡೆಸಲಾಗುವುದು ಎಂದು ಹೇಳಿದರು.

ಕೆಕೆಆರ್‌ಡಿಬಿಯ 5 ಸಾವಿರ ಕೋಟಿ ರೂ. ಅನುದಾನದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಮೀಸಲಿರುವ ಶೇ.15ರಷ್ಟು ಪಾಲನ್ನು ಶೇ.30ಕ್ಕೆ ಹೆಚ್ಚಿಸಬೇಕು. ಅದರಲ್ಲಿ ಕನಿಷ್ಠ ಶೇ.5ರಷ್ಟು ಅನುದಾನವನ್ನು ಕನ್ನಡ ಮಾಧ್ಯಮದ ಅನುದಾನ ರಹಿತ ಖಾಸಗಿ ಶಾಲೆಗಳಿಗೆ ನೀಡಬೇಕು ಎಂದು ಅವರು ಆಗ್ರಹಿಸಿದರು.

ಇತರ ಮಾಧ್ಯಮದ ಖಾಸಗಿ ಶಾಲೆಗಳಿಗೆ ನೇರ ಹಣಕಾಸಿನ ನೆರವು ನೀಡುವ ಬದಲು ಹೆಚ್ಚುವರಿ ಕೊಠಡಿಗಳು, ಶೌಚಾಲಯ, ಕಾಂಪೌಂಡ್, ವಿಜ್ಞಾನ ಹಾಗೂ ಕಂಪ್ಯೂಟರ್ ಪ್ರಯೋಗಾಲಯ, ಸ್ಮಾರ್ಟ್ ಬೋರ್ಡ್ ಸೇರಿದಂತೆ ಮೂಲಸೌಕರ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು. ಅನುದಾನ ರಹಿತ ಖಾಸಗಿ ಶಾಲೆಗಳು ಶೇ.90ಕ್ಕೂ ಹೆಚ್ಚು ಫಲಿತಾಂಶ ನೀಡುತ್ತಿದ್ದರೂ ಸರ್ಕಾರ ಅವುಗಳನ್ನು ಕಡೆಗಣಿಸುತ್ತಿದೆ ಎಂದು ಆರೋಪಿಸಿದ ಅವರು, ಸರ್ಕಾರಿ ಶಾಲಾ ಮಕ್ಕಳಿಗೆ ನೀಡಲು ಉದ್ದೇಶಿಸಿರುವ ಶೇ.7.5ರಷ್ಟು ಮೀಸಲಾತಿ ಜಾರಿಗೊಳಿಸಬಾರದು ಎಂದರು. ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಶಿಕ್ಷಣ ಹಕ್ಕು ಕಾಯ್ದೆ (ಆರ್‌ಟಿಇ)ಯನ್ನು 2013ರ ಮೂಲ ಸ್ವರೂಪದಲ್ಲೇ ಮರು ಜಾರಿಗೊಳಿಸಬೇಕು ಎಂದು ಒಕ್ಕೂಟ ಆಗ್ರಹಿಸಿದೆ.

ಇದೇ ವೇಳೆ, ಕೋಚಿಂಗ್ ಸೆಂಟರ್‌ಗಳ ಹಾವಳಿ ತಡೆಗಟ್ಟುವಂತೆ ಆಗ್ರಹಿಸಿ ಸೆಪ್ಟೆಂಬರ್ 21ರಂದು ಬೀದರ್‌ನಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಸುನಿಲ್ ಹುಡಗಿ ತಿಳಿಸಿದರು.

ಈ ಸಂದರ್ಭದಲ್ಲಿ ಒಕ್ಕೂಟದ ವಿಭಾಗೀಯ ಉಪಾಧ್ಯಕ್ಷ ಓಂಕಾರೇಶ್ವರ್ ವಿಶ್ವನಾಥಪ್ಪ, ಖಜಾಂಚಿ ಮಂಜುರ್ ಇರ್ಫಾನ್, ವಿಭಾಗೀಯ ಕಾರ್ಯದರ್ಶಿ ಅರುಣಕುಮಾರ್ ಪೋಚಾಳ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರುನಾಥ್ ರಡ್ಡಿ, ಜಿಲ್ಲಾ ಉಪಾಧ್ಯಕ್ಷ ಮುಕ್ರಂ ಪಟೇಲ್, ಜಿಲ್ಲಾ ಖಜಾಂಚಿ ಗಣಪತಿ ಸೋಲಪುರೆ, ಬಸವಕಲ್ಯಾಣ ತಾಲೂಕಾಧ್ಯಕ್ಷ ಧನರಾಜ್ ದೊಡಮನಿ, ಬೀದರ್ ದಕ್ಷಿಣ ಕ್ಷೇತ್ರದ ಅಧ್ಯಕ್ಷ ಸಯ್ಯದ್ ಅಹೆಮ್ಮದ್ ಮುದ್ದೆ, ಹಿರಿಯ ಮುಖಂಡರಾದ ಗುಂಡಯ್ಯ ತೀರ್ಥಾ, ಔರಾದ್ ತಾಲೂಕಾಧ್ಯಕ್ಷ ಗುರುನಾಥ್ ದೇಶಮುಖ, ಕಮಲನಗರ ತಾಲೂಕಾಧ್ಯಕ್ಷ ರಾಜಕುಮಾರ್ ಹಮಿಲಪುರೆ ಹಾಗೂ ಭಾಲ್ಕಿ ತಾಲೂಕಾಧ್ಯಕ್ಷ ಸುಭಾಷ್ ಹುಲಸುರೆ ಇದ್ದರು.

2047ರ ವಿಕಸಿತ ಭಾರತ ನಿರ್ಮಾಣಕ್ಕೆ ಯುವಕರು, ತಂತ್ರಜ್ಞಾನವೇ ಪ್ರಮುಖ ಶಕ್ತಿ : ಪ್ರೊ.ಆರ್.ಆರ್.ಬಿರಾದಾರ್



ಕಲಬುರಗಿ,ಸೆ.08-

ಯುವಶಕ್ತಿ, ತಾಂತ್ರಿಕ ಸಾಮರ್ಥ್ಯ ಮತ್ತು ನಾವೀನ್ಯತೆಯೇ 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವ ಪಯಣದ ಪ್ರಮುಖ ಚಾಲಕ ಶಕ್ತಿಗಳಾಗಿವೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಆರ್.ಆರ್. ಬಿರಾದಾರ್ ಹೇಳಿದರು.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕಂಪ್ಯೂಟರ್ ವಿಜ್ಞಾನ ನಿಕಾಯದ ವತಿಯಿಂದ ಸೋಮವಾರ ಆಯೋಜಿಸಿದ್ದ ವಿಶ್ವವಿದ್ಯಾಲಯ ಮಟ್ಟದ ಆಂತರಿಕ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ (ಎಸ್‌ಐಹೆಚ್)-2026 ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರದ ಶಿಕ್ಷಣ ಸಚಿವಾಲಯ, ನಾವೀನ್ಯತೆ ಕೋಶ ಹಾಗೂ ಎಐಸಿಟಿಇ ವಿದ್ಯಾರ್ಥಿಗಳಲ್ಲಿ ಸಂಶೋಧನೆ, ನಾವೀನ್ಯತೆ ಮತ್ತು ತಂತ್ರಜ್ಞಾನ ಆಧಾರಿತ ಸಮಸ್ಯೆ ಪರಿಹಾರ ಕೌಶಲ ಬೆಳೆಸಲು ಹಲವು ವೇದಿಕೆಗಳನ್ನು ಕಲ್ಪಿಸುತ್ತಿವೆ. ವಿಶ್ವವಿದ್ಯಾಲಯ ಮಟ್ಟದ ಹ್ಯಾಕಥಾನ್ ರಾಷ್ಟ್ರೀಯ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್‌ಗೆ ಆಯ್ಕೆ ಪ್ರಕ್ರಿಯೆಯ ಪ್ರಮುಖ ಹಂತವಾಗಿದ್ದು, ವಿದ್ಯಾರ್ಥಿಗಳಿಗೆ ತಮ್ಮ ನವೀನ ಆಲೋಚನೆಗಳನ್ನು ಪ್ರದರ್ಶಿಸುವ ಉತ್ತಮ ಅವಕಾಶವಾಗಿದೆ ಎಂದು ಹೇಳಿದರು.

ವಿಕಸಿತ ಭಾರತ2047 ಗುರಿಯಡಿ ಜ್ಞಾನ, ತಂತ್ರಜ್ಞಾನ ಮತ್ತು ಯುವಜನರ ಸಾಮರ್ಥ್ಯವನ್ನು ಸಮರ್ಪಕವಾಗಿ ಬಳಸಿಕೊಂಡು ಭಾರತವನ್ನು 30ರಿಂದ 40 ಟ್ರಿಲಿಯನ್ ಡಾಲರ್ ಆರ್ಥಿಕತೆಯನ್ನಾಗಿ ರೂಪಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಎಚ್‌ಸಿ ರೊಬೋಟಿಕ್ಸ್ ನಿರ್ದೇಶಕ ಡಾ. ರಾಧಾಕಿಶೋರ್ ಪಾಂಡುರಂಗಿ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿ ಸವಾಲುಗಳನ್ನು ತಂತ್ರಜ್ಞಾನ ಆಧಾರಿತ ನವೀನ ಪರಿಹಾರಗಳ ಮೂಲಕ ಎದುರಿಸಲು ವಿದ್ಯಾರ್ಥಿಗಳು ಮುಂದಾಗಬೇಕು ಎಂದು ಕರೆ ನೀಡಿದರು.

ಗೌರವ ಅತಿಥಿಗಳಾಗಿ ಫ್ಲೈಯೆಟ್ ಸಂಸ್ಥೆಯ ಸ್ಥಾಪಕ ಹಾಗೂ ಸಿಟಿಒ ಸಾಯಿ ವಿಷ್ಣು ವಿಪ್ಪಗುಂಟಾ, ಯುಕೆ ಮೂಲದ ಲಾಯ್ಡ್ಸ್ ಬ್ಯಾಂಕಿಂಗ್ ಗ್ರೂಪ್‌ನ ಡೇಟಾ ಸೈನ್ಸ್ ಇಂಜಿನಿಯರ್ ಅಂಶುಮಾನ್ ದೀಕ್ಷಿತ್ ಮತ್ತು ಪೆರೆನಿಯಲ್ ಸಿಸ್ಟಮ್ಸ್‌ನ ಲೀಡ್ ಎಐ ಇಂಜಿನಿಯರ್ ಶ್ರೀಕಾಂತ್ ಕಸನಿ ವಿದ್ಯಾರ್ಥಿಗಳಿಗೆ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಮತ್ತು ನಾವೀನ್ಯತೆ ಕುರಿತ ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದಲ್ಲಿ ಕಂಪ್ಯೂಟರ್ ವಿಜ್ಞಾನ ನಿಕಾಯದ ಡೀನ್ ಪ್ರೊ. ಆರ್.ಎಸ್. ಹೆಗಡಿ, ಎಸ್‌ಐಹೆಚ್ ಸಮಿತಿ ಸದಸ್ಯರು ಹಾಗೂ ಪ್ರಾಧ್ಯಾಪಕರಾದ ಡಾ. ಗುರುರಾಜ ಮುಕರಂಬಿ, ಡಾ. ಕಗಲೆ ಮಾಧುರಿ ರಘುನಾಥ್, ರಾಘವೇಂದ್ರ ಎಂ. ಇಚ್ಚಂಗಿ, ಡಾ. ಮನೋರಂಜನ್ ಗಂಧೂಡಿ, ಡಾ. ಮುದನಾರು ದತ್ತ, ಡಾ. ಶ್ಯಾಮಲಾ, ಡಾ. ಧನಂಜಯ, ಡಾ. ಅಷ್ಟಾ ಸೇರಿದಂತೆ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕಾರ್ಯಕ್ರಮವು ವಂದೇ ಮಾತರಂ ಗೀತೆಯೊಂದಿಗೆ ಆರಂಭವಾಯಿತು. ವಿಶ್ವವಿದ್ಯಾಲಯದ ಎಸ್‌ಐಹೆಚ್ ಸಂಯೋಜಕ ಡಾ. ರೋಹಿತ್ ಕುಮಾರ್ ಸ್ವಾಗತಿಸಿದರು. ಡಾ. ನೃಸಿಂಘ ಚರಣ್ ಪ್ರಧಾನ್ ವಂದನಾರ್ಪಣೆ ಸಲ್ಲಿಸಿದರು. ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

ಒಂದನೇಯ ಪುಟದಿಂದ

ಶೀಘ್ರದಲ್ಲೇ ಇನ್ನೂ 25 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಣೆ : ಪರಮೇಶ್ವರ್

ಮಾತನಾಡಿದ ಪರಮೇಶ್ವರ್, ಸುಪ್ರೀಂ ಕೋರ್ಟ್ ಆದೇಶದಂತೆ ಮಾನವೀಯತೆ ದೃಷ್ಟಿಯಿಂದ 1,453 ನಿವೇಶನಗಳನ್ನು ಹಂಚಿಕೆ ಮಾಡುವ ನಿರ್ಧಾರ ಕೈಗೊಳ್ಳಲಾಗಿದೆ. ರೈತರಿಗೆ ಅನ್ಯಾಯವಾಗದಂತೆ ಈ ತೀರ್ಮಾನ ತೆಗೆದುಕೊಳ್ಳಲಾಗಿದ್ದು, ಯಾರಿಗೂ ವೈಯಕ್ತಿಕ ಲಾಭ ಮಾಡಿಕೊಡುವ ಉದ್ದೇಶ ಇಲ್ಲ ಎಂದು ಹೇಳಿದರು.

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ತಮಿಳುನಾಡು ಕಾವೇರಿ ನೀರನ್ನು 4.8 ಲಕ್ಷ ಹೆಕ್ಟೇರ್ ಪ್ರದೇಶದ ಕೃಷಿಗೆ ಬಳಸುತ್ತಿರುವ ವಿಚಾರವನ್ನು ರಾಜ್ಯ ಸರ್ಕಾರ ಪ್ರಸ್ತಾಪಿಸಲಿದೆ ಎಂದು ಅವರು ತಿಳಿಸಿದರು.

ಎಪಿಎಂಸಿಗಳಲ್ಲಿ ಬಾಲಕಾರ್ಮಿಕ ಪದ್ಧತಿ ತಕ್ಷಣ ನಿಲ್ಲಿಸಿ : ಸಿಎಂ

ತಿಳಿದುಕೊಂಡಿದ್ದೇನೆ ಎಂದರು.

ಎಪಿಎಂಸಿ ವ್ಯವಸ್ಥೆ ಸಂಪೂರ್ಣವಾಗಿ ನಂಬಿಕೆಯ ಆಧಾರದ ಮೇಲೆ ನಡೆಯುತ್ತಿದ್ದು, ಉತ್ತರ ಭಾರತದಿಂದಲೂ ಕೃಷಿ ಉತ್ಪನ್ನಗಳು ಇದೇ ನಂಬಿಕೆಯ ಮೇಲೆ ಬರುತ್ತವೆ. ಆರ್‌ಟಿಜಿಎಸ್ ಮೂಲಕ ಹಣ ಪಾವತಿ ನಡೆಯುತ್ತಿದೆ ಎಂದು ಹೇಳಿದರು.

ರಾಜ್ಯದ ಎಲ್ಲ ಎಪಿಎಂಸಿ ಮಾರುಕಟ್ಟೆಗಳಿಗೆ ಸಚಿವರು ಭೇಟಿ ನೀಡಿ ರೈತರು ಮತ್ತು ವ್ಯಾಪಾರಿಗಳಿಗೆ ನ್ಯಾಯ ದೊರಕುವಂತೆ ಕ್ರಮ ಕೈಗೊಳ್ಳಬೇಕು. ರೈತರ ಹಿತಾಸಕ್ತಿ ಕಾಪಾಡಲು ಸರ್ಕಾರ ಸೂಕ್ತ ರೂಪುರೇಷೆ ಸಿದ್ಧಪಡಿಸಿದೆ ಎಂದು ಮುಖ್ಯಮಂತ್ರಿ ಹೇಳಿದರು.

ಎಪಿಎಂಸಿ ಮಾರುಕಟ್ಟೆಗಳ ಪಾರ್ಕಿಂಗ್ ವ್ಯವಸ್ಥೆ ಕುರಿತು ಮಾತನಾಡಿದ ಅವರು, ಪಾರ್ಕಿಂಗ್ ನಿರ್ವಹಣೆಗೆ ಕರೆಯಲಾಗಿದ್ದ ಟೆಂಡರ್‌ಗೆ ಯಾರೂ ಅರ್ಜಿ ಸಲ್ಲಿಸಿಲ್ಲ ಎಂಬ ಮಾಹಿತಿ ದೊರೆತಿದ್ದು, ಈ ಕುರಿತು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು

ಅಪಾಯಕಾರಿ ವಿದ್ಯುತ್ ಕಂಬ ತೆರವು ಇಲ್ಲ: ಜೆಸ್ಕಾಂ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹ

ವಿದ್ಯುತ್ ಕಂಬದ ಸ್ಥಿತಿ ಮತ್ತಷ್ಟು ಹದಗೆಟ್ಟರೆ ಯಾವುದೇ ಅವಘಡ ಸಂಭವಿಸಿದರೂ ಅದಕ್ಕೆ ಯಾರು ಹೊಣೆ ಎಂದು ಅವರು ಪ್ರಶ್ನಿಸಿದರು.

ಸಂಬಂಧಪಟ್ಟ ಕಿರಿಯ ಅಭಿಯಂತರರ ವಿರುದ್ಧ ನಿಷ್ಪಕ್ಷಪಾತ ಇಲಾಖಾ ವಿಚಾರಣೆ ನಡೆಸಿ, ಕರ್ತವ್ಯಲೋಪ ಸಾಬೀತಾದಲ್ಲಿ ಕಠಿಣ ಶಿಸ್ತು ಕ್ರಮ ಕೈಗೊಳ್ಳಬೇಕು. ಅಲ್ಲದೆ ಮಂಗಳವಾರಪೇಟೆಯ ಅಪಾಯಕಾರಿ ಹಳೆಯ ವಿದ್ಯುತ್ ಕಂಬವನ್ನು ತಕ್ಷಣ ತೆರವುಗೊಳಿಸಿ, ಹೊಸ ಕಂಬ ಅಳವಡಿಸುವಂತೆ ಜೆಸ್ಕಾಂ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಶಹಬಾಜ್ ಅಹ್ಮದ್, ತನ್ವಿರ್ ಅಹ್ಮದ್, ಖಾಜಾ ಮೊಯಿನುದ್ದಿನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಪರಿಸರ ಸ್ನೇಹಿ ಗಣೇಶೋತ್ಸವ ಆಚರಣೆಗೆ ಪೂವಿತಾ ಕರೆ

ಇನ್ನಿತರ ಪೂಜಾ ಸಾಮಾಗ್ರಿಗಳನ್ನು ಗೊತ್ತುಪಡಿಸಿದ ತಾತ್ಕಾಲಿಕ ಟ್ಯಾಂಕ್/ಕಟ್ಟೆ ಮತ್ತು ಕೊಳದ ದಡದಲ್ಲಿ ಇಟ್ಟಿರುವ ಬುಟ್ಟಿಗಳಲ್ಲಿ ಅಥವಾ ನಿಗಧಿತ ಜಾಗದಲ್ಲಿ ಹಾಕಲು ತಿಳಿಸಿದೆ.

ಸಾರ್ವಜನಿಕರು ಮನೆಗಳಲ್ಲಿ ಸ್ಥಾಪಿಸಲ್ಪಟ್ಟ ಮೂರ್ತಿಗಳ ವಿಸರ್ಜನೆಯ ಸಮಯದಲ್ಲಿ ಒಂದು ಬಕೆಟ್ ನೀರಿನಲ್ಲಿ ವಿಸರ್ಜಿಸುವ ಪದ್ಧತಿಯನ್ನು ರೂಢಿ ಮಾಡಿಕೊಳ್ಳುವುದು ಮತ್ತು ವಿಸರ್ಜನೆ ಮಾಡಲಾದ ಮಣ್ಣನ್ನು ಮನೆಗಳ ಆವರಣದಲ್ಲಿರುವ ಗಿಡಗಳ ಬದುಗಳಿಗೆ ಹಾಕುವುದು.

ಹಬ್ಬದ ಸಮಯದಲ್ಲಿ ಶಬ್ದ ಮತ್ತು ವಾಯು ಮಾಲಿನ್ಯ ತಡೆಗೆ ಹೆಚ್ಚಿನ ಧ್ವನಿ ಹೊರಸೂಸುವ ಧ್ವನಿವರ್ಧಕ ಮತ್ತು ಪಟಾಕಿಗಳನ್ನು ಉಪಯೋಗಿಸಬೇಡಿ (ರಾತ್ರಿ ಸಮಯ 10.00 ಗಂಟೆಯಿಂದ ಬೆಳಿಗ್ಗೆ 06.00 ಗಂಟೆಯವರೆಗೆ ಧ್ವನಿವರ್ಧಕ/ಪಟಾಕಿಗಳ ಬಳಕೆಯನ್ನು ನಿಷೇಧಿಸಲಾಗಿದೆ).

ಈ ರೀತಿ ಈ ವರ್ಷ ಮಣ್ಣಿನ ಗಣೇಶ ಮೂರ್ತಿಗಳನ್ನು ಪೂಜಿಸುವುದರೊಂದಿಗೆ ರಾಯಚೂರು ಜಿಲ್ಲೆಯ ನೈಸರ್ಗಿಕ ಜಲಮೂಲಗಳು (ಕೆರೆ, ಬಾವಿ, ಕೊಳ, ನದಿ) ಕಲುಷಿತಗೊಳ್ಳದಂತೆ ಹಾಗೂ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗದಂತೆ ಮತ್ತು ಸಾರ್ವಜನಿಕ ಆರೋಗ್ಯಕ್ಕೆ ಧಕ್ಕೆಯಾಗದಂತೆ ಪರಿಸರ ಸ್ನೇಹಿ ಗಣೇಶ ಹಬ್ಬವನ್ನು ಆಚರಿಸೋಣ ಎಂದು ರಾಯಚೂರು ಜಿಲ್ಲೆಯ ಸಮಸ್ತ ನಾಗರೀಕರಿಗೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

108 ಆಂಬುಲೆನ್ಸ್ ನೌಕರರ ಮುಷ್ಕರ : ಸೆ.20ರಿಂದ ಸಾಮೂಹಿಕ ರಾಜೀನಾಮೆ ಎಚ್ಚರಿಕೆ

ಯಾವುದೇ ವೇತನ ಹೆಚ್ಚಳ ಮಾಡಲಾಗಿಲ್ಲ ಎಂದು ನೌಕರರು ತಿಳಿಸಿದ್ದಾರೆ.

ಮೂರು ಪಾಳಿಗಳಲ್ಲಿ ಕಾರ್ಯ ನಿರ್ವಹಿಸಲು ಅಗತ್ಯವಿರುವ ಆಂ ಬುಲೆನ್ಸ್ ಸೌಲಭ್ಯ ಒದಗಿಸಬೇಕು. ವಲಯವಾರು ನಿಗದಿಪಡಿಸಿರುವ ವೇತನ ಪದ್ಧತಿ ರದ್ದುಪಡಿಸಿ ಎಲ್ಲ ನೌಕರರಿಗೂ ಏಕರೂಪ ವೇತನ ಜಾರಿಗೊಳಿಸಬೇಕು.

ಮಹತ್ವಾಕಾಂಕ್ಷಿ ಜಿಲ್ಲೆ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆ

ಯೋಜನೆ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕಾರ್ಯಕ್ಷೇತ್ರ ವೀಕ್ಷಣೆ ಮಾಡಿ: ಉಜ್ವಲ್ ಕುಮಾರ್ ಘೋಷ್

ಫಲಿತಾಂಶ ಹೊಂದಿದ ಶಾಲೆಗಳನ್ನು ಗುರುತಿಸಿ, ಈ ಶಾಲೆಗಳಲ್ಲಿ ಫಲಿತಾಂಶ ಹೆಚ್ಚಳಕ್ಕಾಗಿ ವಿಶೇಷ ಕ್ರಮವಹಿಸಬೇಕೆಂದರು.

ಜಿಲ್ಲೆಯ ಮಕ್ಕಳಲ್ಲಿ ಅಪೌಷ್ಟಿಕತೆ, ಬಾಲ ಕಾರ್ಮಿಕ ಪದ್ಧತಿ ಹಾಗೂ ಬಾಲ್ಯ ವಿವಾಹದಂತಹ ಸಾಮಾಜಿಕ ಪಿಡುಗನ್ನು ಹೋಗಲಾಡಿಸಲು ಸಂಬಧಿಸಿದ ಇಲಾಖೆಯ ಅಧಿಕಾರಿಗಳು ಎಚ್ಚರ ವಹಿಸಬೇಕೆಂದು ಸೂಚಿಸಿದರು.

ಈ ವೇಳೆ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಮಾತನಾಡಿ, ಮಹತ್ವಾಕಾಂಕ್ಷಿ ಜಿಲ್ಲೆ ಯೋಜನೆಯಡಿ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿ ಸಾಧಿಸಲಾಗಿದ್ದು, ಹಲವು ಸೂಚ್ಯಂಕಗಳಲ್ಲಿ ಉತ್ತಮ ಸ್ಥಾನಗಳಿಸಲಾಗಿದೆ. ಆರೋಗ್ಯ, ಪೌಷ್ಟಿಕತೆ, ಕೃಷಿ, ಜಲಸಂಪನ್ಮೂಲ, ಶಿಕ್ಷಣ, ಆರ್ಥಿಕತೆ, ಕೌಶಲಾಭಿವೃದ್ಧಿ ಹಾಗೂ ಮೂಲಸೌಕರ್ಯ ಸೇರಿದಂತೆ ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆ ಸೂಚ್ಯಂಕಗಳ ಅನುಷ್ಠಾನಕ್ಕೆ ಹೆಚ್ಚಿನ ಗಮನ ಹರಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ಮಾತನಾಡಿ, ಜಿಲ್ಲೆಯ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಲು ತಜ್ಞ ವೈದ್ಯರ ಲಭ್ಯತೆ, ಖಾಲಿ ಹುದ್ದೆಗಳು ಮತ್ತು ಸಂಭಾವನೆಯ ಮೌಲ್ಯಮಾಪನವನ್ನು ಪ್ರಾರಂಭಿಸಲಾಗಿದೆ. ಕರ್ನಾಟಕ, ತಮಿಳುನಾಡು, ರಾಜಸ್ಥಾನ, ಕೇರಳ, ತೆಲಂಗಾಣ ಮತ್ತು ಆಂಧ್ರಪ್ರದೇಶದ ತುಲನಾತ್ಮಕ ಸಂಭಾವನೆಯ ವಿಶ್ಲೇಷಣೆಯನ್ನು ಸಿದ್ದಪಡಿಸಲಾಗಿದೆ. ಸಂಭಾವನೆ ಹೆಚ್ಚಳಕ್ಕಾಗಿ ಪ್ರಸ್ತಾವನೆಯನ್ನು ಸಕ್ಷಮ ಪ್ರಾಧಿಕಾರದ ಮುಂದೆ ಇಡಲಾಗುತ್ತಿದೆ. ಅಲ್ಲದೆ ಮಕ್ಕಳ ತಜ್ಞರು, ಸ್ತ್ರೀ ರೋಗ ಮತ್ತು ಪ್ರಸೂತಿ ತಜ್ಞರು ಹಾಗೂ ಅರಿವಳಿಕೆ ತಜ್ಞರ ನೇಮಕಾತಿಗೆ ಆದ್ಯತೆ ನೀಡಲು ಕ್ರಮ ವಹಿಸಲಾಗಿದೆ ಎಂದರು.

ಈ ವೇಳೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ ಅವರು ಮತನಾಡಿ, ಮಕ್ಕಳ ಹಾಗೂ ತಾಯಂದಿರ ಆರೋಗ್ಯ ಸುಧಾರಿಸಲು ಪೋಷಣಾ ಅಭಿಯಾನದಡಿ 0-6 ವರ್ಷ ವಯಸ್ಸಿನ ಮಕ್ಕಳು, ಹದಿಹರೆಯದ ಹೆಣ್ಣುಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರ ಮೇಲೆ ಕೇಂದ್ರೀಕರಿಸಲಾಗುತ್ತಿದೆ. ಮಕ್ಕಳಲ್ಲಿ ಅಪೌಷ್ಟಿಕತೆ, ಕಡಿಮೆ ತೂಕ ಮತ್ತು ರಕ್ತ ಹೀನತೆಯನ್ನು ಹೋಗಲಾಡಿಸಲು ಪೌಷ್ಟಿಕಾಂಶದ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಅಲ್ಲದೆ ಪೋಷಣ್ ಟ್ರಾಕ್ ಮೂಲಕ ಮಹಿಳೆಯರನ್ನು ಹಾಗೂ ಮಕ್ಕಳನ್ನು ಮೇಲುಸ್ತುವಾರಿ ಮಾಡಲಾಗುತ್ತದೆ. ಸರ್ಕಾರದ ಸೂಚನೆಯಂತೆ ಅಂಗನವಾಡಿ ಕೇಂದ್ರದಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳ ಹಾಜರಾತಿಯನ್ನು ಬೈಯೋಮೆಟ್ರಿಕ್ ಮೂಲಕ ತೆಗೆದುಕೊಳ್ಳಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ ಚೌಹಣ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕ ಮಹಮ್ಮದ್ ಅಲಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಸ್ವಾಮಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಧಕ ಸೋಮಶೇಖರಪ್ಪ ಹೋಕ್ರಾಣಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ.ಸುರೇಶ್, ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯ ಜಿಲ್ಲಾ ಕೋ ಆರ್ಡಿನೇಟರ್ ಸೌಮ್ಯ ತಡಕಲ್, ರಂಜೀತ್ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಕುಡಿಯುವ ನೀರಿನ ಅಭಾವ ತಡೆಗೆ ಅಗತ್ಯ ಕ್ರಮ : ಸಚಿವ ಈಶ್ವರ್ ಖಂಡ್ರೆ



ಬೀದರ್ ,ಸೆ.08-

ರಾಜ್ಯದಲ್ಲಿ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದ್ದರೂ ಸಾರ್ವಜನಿಕರಿಗೆ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಸರ್ಕಾರ ಅಗತ್ಯ ಸಿದ್ಧತೆ ಮಾಡಿಕೊಂಡಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕುಡಿಯುವ ನೀರಿನ ನಿರ್ವಹಣೆಗೆ ಇದುವರೆಗೆ 306 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗಿದೆ. ಗ್ರಾಮೀಣ ಭಾಗದ ಪ್ರತಿಯೊಂದು ವಿಧಾನಸಭಾ ಕ್ಷೇತ್ರಕ್ಕೆ ತಲಾ 1 ಕೋಟಿ ರೂ. ಸೇರಿದಂತೆ ವಿವಿಧ ಕ್ರಿಯಾ ಯೋಜನೆಗಳಿಗೆ ಹೆಚ್ಚುವರಿ ಅನುದಾನ ನೀಡಲಾಗಿದೆ ಎಂದು ತಿಳಿಸಿದರು.

ಬೀದರ್ ಜಿಲ್ಲೆಗೆ ಈಗಾಗಲೇ 4 ಕೋಟಿ ರೂ. ಬಿಡುಗಡೆ ಮಾಡಲಾಗಿದ್ದು, ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ 6 ಕೋಟಿ ರೂ. ಹೆಚ್ಚುವರಿ ಅನುದಾನ ಮಂಜೂರು ಮಾಡಲಾಗಿದೆ. ಬತ್ತಿರುವ ಕೊಳವೆಬಾವಿಗಳಿರುವ ಗ್ರಾಮಗಳಲ್ಲಿ ಹೊಸ ಕೊಳವೆಬಾವಿ ಕೊರೆಸುವುದು, ಬಾಡಿಗೆ ಕೊಳವೆಬಾವಿ ಬಳಸುವುದು ಹಾಗೂ ಟ್ಯಾಂಕರ್ ಮೂಲಕ ನೀರು ಪೂರೈಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದರೆ 24 ಗಂಟೆಗಳೊಳಗೆ ಪರಿಹಾರ ಕಲ್ಪಿಸುವಂತೆ ನಿರ್ದೇಶನ ನೀಡಿರುವುದಾಗಿ ಹೇಳಿದರು.

ಬರ ಘೋಷಣೆಗೆ ಕೇಂದ್ರ ಸರ್ಕಾರ ನಿಗದಿಪಡಿಸಿರುವ ಮಾನದಂಡಗಳು ಅವೈಜ್ಞಾನಿಕವಾಗಿದ್ದು, ಉಪಗ್ರಹ ಚಿತ್ರಣ, ಮಣ್ಣಿನ ತೇವಾಂಶ ಮತ್ತು ಸಸ್ಯವರ್ಗದ ಆಧಾರದ ಮೇಲೆ ಬರ ನಿರ್ಧರಿಸುವ ವ್ಯವಸ್ಥೆಯಿಂದ ನೈಜ ಸಂಕಷ್ಟದಲ್ಲಿರುವ ರೈತರಿಗೆ ಅನ್ಯಾಯವಾಗುತ್ತಿದೆ ಎಂದು ಅವರು ಆರೋಪಿಸಿದರು.

ಬೀದರ್ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಬೆಳೆ ಹಾನಿಯಾಗಿದ್ದರೂ ಕೇಂದ್ರದ ಕಠಿಣ ಮಾರ್ಗಸೂಚಿಗಳಿಂದ ಬರ ಘೋಷಣೆಗೆ ತೊಡಕಾಗಿದೆ. ಈ ಮಾನದಂಡಗಳನ್ನು ಸಡಿಲಗೊಳಿಸುವಂತೆ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರ ನಿಯೋಗದಿಂದ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಜಿಲ್ಲೆಯ ನಾಲ್ಕು ತಾಲೂಕುಗಳಲ್ಲಿ ಬರ ಘೋಷಣೆಯಾಗಿದ್ದು, ಭಾಲ್ಕಿ ತಾಲೂಕಿನಲ್ಲಿ ಕೃಷಿ ಮತ್ತು ಕಂದಾಯ ಇಲಾಖೆಗಳು ಜಂಟಿಯಾಗಿ ಗ್ರೌಂಡ್ ಟ್ರೂಥಿಂಗ್ ಪರಿಶೀಲನೆ ನಡೆಸಲಿವೆ. ಕಳೆದ ವರ್ಷ ರೈತರಿಗೆ 264 ಕೋಟಿ ರೂ. ಬೆಳೆ ವಿಮೆ ಹಾಗೂ ಎಸ್‌ಡಿಆರ್‌ಎಫ್, ಎನ್‌ಡಿಆರ್‌ಎಫ್ ಮತ್ತು ರಾಜ್ಯ ಸರ್ಕಾರದ ಟಾಪ್-ಅಪ್ ಸೇರಿ 525 ಕೋಟಿ ರೂ.ಗೂ ಹೆಚ್ಚು ಪರಿಹಾರವನ್ನು ನೇರವಾಗಿ ರೈತರ ಖಾತೆಗೆ ಜಮೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಗ್ರಾಮೀಣ ವಲಸೆ ತಡೆಯಲು ಜುಲೈ 1ರಿಂದ ಜಿಲ್ಲೆಯ 181 ಗ್ರಾಮ ಪಂಚಾಯತಿಗಳಲ್ಲಿ ಉದ್ಯೋಗ ಖಾತ್ರಿ ಕಾಮಗಾರಿಗಳನ್ನು ಚುರುಕುಗೊಳಿಸಲಾಗಿದ್ದು, ಕಳೆದ ಎರಡು ತಿಂಗಳಲ್ಲಿ 110 ಲಕ್ಷ ಮಾನವ ದಿನಗಳ ಉದ್ಯೋಗ ಸೃಷ್ಟಿಸಲಾಗಿದೆ ಎಂದು ಹೇಳಿದರು.

ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ (ಬಿಎಸ್‌ಎಸ್‌ಕೆ), ಮಹಾತ್ಮ ಗಾಂಧಿ ಸಕ್ಕರೆ ಕಾರ್ಖಾನೆ ಹಾಗೂ ಎನ್‌ಎಸ್‌ಎಸ್‌ಕೆ ತೀವ್ರ ಆರ್ಥಿಕ ಸಂಕಷ್ಟದಲ್ಲಿದ್ದು, ಆಡಳಿತ ಮಂಡಳಿಗಳ ನಿರ್ಲಕ್ಷ್ಯ ಹಾಗೂ ಅಕ್ರಮಗಳ ಕುರಿತು ತನಿಖೆಗೆ ಸೂಚಿಸಲಾಗಿದೆ. ಜಿಲ್ಲೆಯ ಸುಮಾರು ನಾಲ್ಕು ಲಕ್ಷ ರೈತರಿಗೆ ಜೀವನಾಡಿಯಾಗಿರುವ ಡಿಸಿಸಿ ಬ್ಯಾಂಕ್ ಮತ್ತು ಠೇವಣಿದಾರರ ಹಿತಾಸಕ್ತಿ ಕಾಪಾಡಲು ಕಾರ್ಖಾನೆಗಳನ್ನು ಲೀಸ್‌ಗೆ ನೀಡುವ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗುವುದು ಎಂದು ಸಚಿವ ಈಶ್ವರ್ ಖಂಡ್ರೆ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠ್ಠಲರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸುಮೀತ್ ಸುಭಾಷರಾವ್ ಪಾಟೀಲ್ ಉಪಸ್ಥಿತರಿದ್ದರು.

ಅ.30ರಿಂದ ಕಲಬುರಗಿಯಲ್ಲಿ ಎಸ್‌ಎಫ್‌ಐ 17ನೇ ರಾಜ್ಯ ಸಮ್ಮೇಳನ; ಸ್ವಾಗತ ಸಮಿತಿ ರಚನೆಗೆ ಸಭೆ



ಕಲಬುರಗಿ, ಸೆ.8

ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) 17ನೇ ರಾಜ್ಯ ಸಮ್ಮೇಳನವನ್ನು ಅ.30, 31 ಹಾಗೂ ನ.1ರಂದು ಕಲಬುರಗಿಯಲ್ಲಿ ಆಯೋಜಿಸಲು ನಿರ್ಧರಿಸಲಾಗಿದ್ದು, ಸಮ್ಮೇಳನದ ಯಶಸ್ವಿ ಆಯೋಜನೆಗಾಗಿ ಸ್ವಾಗತ ಸಮಿತಿ ರಚನೆ ಕುರಿತು ನಗರದ ಕನ್ನಡ ಭವನದಲ್ಲಿ ಸೋಮವಾರ ಸಭೆ ನಡೆಯಿತು.


ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಗತಿಪರ ಚಿಂತಕ ಆರ್.ಕೆ. ಹುಡುಗಿ, ಎಸ್‌ಎಫ್‌ಐ ದೇಶದ ಪ್ರಮುಖ ಸೈದ್ಧಾಂತಿಕ ವಿದ್ಯಾರ್ಥಿ ಸಂಘಟನೆಗಳಲ್ಲಿ ಒಂದಾಗಿದ್ದು, ಅದರ 17ನೇ ರಾಜ್ಯ ಸಮ್ಮೇಳನವನ್ನು ತೊಗರಿಯ ನಾಡು ಕಲಬುರಗಿಯಲ್ಲಿ ಆಯೋಜಿಸುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದು ಹೇಳಿದರು.

ಸಮ್ಮೇಳನ ಯಶಸ್ವಿಯಾಗಲು ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದ ಅವರು, ವಿದ್ಯಾರ್ಥಿ ಚಳವಳಿಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಈ ಸಮ್ಮೇಳನ ಮಹತ್ವದ ವೇದಿಕೆಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಸಭೆಯಲ್ಲಿ ಸಾಹಿತಿಗಳಾದ ಕೆ. ನೀಲಾ, ಮೀನಾಕ್ಷಿ ಬಾಳಿ, ಎಸ್‌ಎಫ್‌ಐ ರಾಜ್ಯ ಉಪಾಧ್ಯಕ್ಷ ಬಸವರಾಜ ಎಸ್., ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಅಧ್ಯಕ್ಷ ಲಕ್ಷ್ಮಣ ದಸ್ತಿ, ಸಾಹಿತಿ ಡಾ. ಜಯದೇವಿ ಗಾಯಕವಾಡ, ಪ್ರಗತಿಪರ ಚಿಂತಕ ಅಫ್ಜಲ್ ಮೆಹಮೂದ್, ಎಸ್‌ಎಫ್‌ಐ ಮಾಜಿ ರಾಜ್ಯ ಮುಖಂಡ ಸಿ.ಬಿ. ಪಾಟೀಲ ಒಕಳಿ, ಹಾಸ್ಟೆಲ್ ಹೊರಗುತ್ತಿಗೆ ನೌಕರರ ಸಿಬ್ಬಂದಿ ಸಂಘದ ರಾಜ್ಯಾಧ್ಯಕ್ಷ ಭೀಮಶೆಟ್ಟಿ ಯಂಪಳ್ಳಿ, ಅಸ್ಗರ ಅಲಿ ಚುಲಬುಲ್, ದಲಿತಪರ ಮುಖಂಡರಾದ ಅರ್ಜುನ ಭದ್ರೆ, ಮರೆಯಪ್ಪ ಹಳ್ಳಿ ಹಾಗೂ ಜಾಗತಿಕ ಲಿಂಗಾಯತ ಮಹಾಸಭಾ ಅಧ್ಯಕ್ಷ ಆರ್.ಜಿ. ಶೆಟ್ಕಾರ್ ಸೇರಿದಂತೆ ವಿವಿಧ ಕ್ಷೇತ್ರಗಳ ಮುಖಂಡರು ಭಾಗವಹಿಸಿ ಸಮ್ಮೇಳನದ ಯಶಸ್ಸಿಗೆ ಸಲಹೆ-ಸೂಚನೆಗಳನ್ನು ನೀಡಿದರು.

ಸಭೆಯ ಅಧ್ಯಕ್ಷತೆಯನ್ನು ಎಸ್‌ಎಫ್‌ಐ ರಾಜ್ಯಾಧ್ಯಕ್ಷ ಶಿವಪ್ಪ ಅಂಬ್ಲಿಕಲ್ ವಹಿಸಿದ್ದರು. ರಾಜ್ಯ ಕಾರ್ಯದರ್ಶಿ ವಿಜಯಕುಮಾರ್ ಟಿ.ಎಸ್. ಪ್ರಾಸ್ತಾವಿಕವಾಗಿ ಮಾತನಾಡಿದರು. ಇಮಾಮ್ ಸಾಬ್ ನದಾಫ್ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

ಈ ಸಂದರ್ಭದಲ್ಲಿ ಎಸ್‌ಎಫ್‌ಐ ರಾಜ್ಯ ಉಪಾಧ್ಯಕ್ಷ ಬಸವರಾಜ ಗುಳೆದಾಳ, ಜಿಲ್ಲಾಧ್ಯಕ್ಷ ಸರ್ವೆಶ್ ಪಿ. ಮಾವಿನಕರ್, ಕಾರ್ಯದರ್ಶಿ ಸುಜಾತ ವೈ., ಉಪಾಧ್ಯಕ್ಷೆ ಪ್ರೇಮ, ಮುಖಂಡರಾದ ಮಂಜು, ಪ್ರದೀಪ್ ಮ್ಯಾಗಡಿ, ತಯಣ್ಣ, ನಾಗರಾಜ್, ಬೃಂದಾ ಎಸ್., ಸಿಐಟಿಯು ಕಾರ್ಯದರ್ಶಿ ಶಾಂತ ಎಸ್. ಘಂಟಿ, ದೇವದಾಸಿ ಮಹಿಳಾ ಸಂಘದ ಚಂದಾಮ್ಮ, ಕಟ್ಟಡ ಕಾರ್ಮಿಕ ಮುಖಂಡರಾದ ಶ್ರೀಮಂತ ಬಿರಾದಾರ, ನಾಗಪ್ಪ ರಾಯಚೂರುಕರ್ ಡಿವೈಎಫ್‌ಐ ಜಿಲ್ಲಾಧ್ಯಕ್ಷೆ ಸಮೀನಾ, ಸಾಮೂಹಿಕ ಸಂಘಟನೆಗಳ ಮುಖಂಡರಾದ ಸುಧಾಮ ಧನ್ನಿ, ಪಾಂಡುರಂಗ ಮಾವಿನಕರ್ ಸೇರಿದಂತೆ ಎಸ್‌ಎಫ್‌ಐ ಜಿಲ್ಲಾ ಸಮಿತಿ ಸದಸ್ಯರು, ವಿವಿಧ ತಾಲೂಕುಗಳ ಮುಖಂಡರು, ಚಳುವಳಿಯ ಹಿತೈಷಿಗಳು ಹಾಗೂ ಸಾಮೂಹಿಕ ಸಂಘಟನೆಗಳ ಪ್ರತಿನಿಧಿಗಳು ಪಾಲ್ಗೊಂಡಿದ್ದರು.



ಆಳಂದದಲ್ಲಿ ಹೊಸ ಪ್ರಾದೇಶಿಕ ರಾಜಕೀಯ ಪಕ್ಷ ಸ್ಥಾಪನೆಗೆ ಚರ್ಚೆ

ಆಳಂದ ,ಸೆ.08-

ಸಂವಿಧಾನದ ಆಶಯ, ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಜಾತ್ಯತೀತ ಮೌಲ್ಯಗಳನ್ನು ಕೇಂದ್ರವಾಗಿಟ್ಟುಕೊಂಡು ಹೊಸ ಪ್ರಾದೇಶಿಕ ರಾಜಕೀಯ ಪಕ್ಷ ಸ್ಥಾಪಿಸುವ ಕುರಿತು ಆಳಂದದಲ್ಲಿ ಭಾನುವಾರ ಸಭೆ ನಡೆಯಿತು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಸಭೆಯಲ್ಲಿ ಸಾಮಾಜಿಕ ಹೋರಾಟಗಾರ ಹಾಗೂ ನಟ ಚೇತನ್ ಅಹಿಂಸಾ ಮಾತನಾಡಿ, ಹೊಸ ರಾಜಕೀಯ ಪಕ್ಷದ ಅಧಿಕೃತ ಘೋಷಣೆಯನ್ನು ಜನವರಿಯಲ್ಲಿ ಹುಬ್ಬಳ್ಳಿಯಲ್ಲಿ ನಡೆಯಲಿರುವ ಬೃಹತ್ ಸಮಾವೇಶದಲ್ಲಿ ಮಾಡಲು ಉದ್ದೇಶಿಸಲಾಗಿದೆ ಎಂದು ತಿಳಿಸಿದರು.

ಸುಮಾರು 25 ಸಾವಿರ ಜನರನ್ನು ಸೇರಿಸಿ ಪಕ್ಷದ ಚಿಹ್ನೆ ಹಾಗೂ ಭಾವುಟವನ್ನು ಬಿಡುಗಡೆ ಮಾಡುವ ಯೋಜನೆ ರೂಪಿಸಲಾಗಿದೆ. ಹೊಸ ಪಕ್ಷವು ಯಾವುದೇ ಒಂದು ಜಾತಿ ಅಥವಾ ಸಮುದಾಯಕ್ಕೆ ಸೀಮಿತವಾಗದೆ, ಎಲ್ಲ ವರ್ಗಗಳ ಹಕ್ಕುಗಳು, ಸಮಾನ ಅವಕಾಶಗಳು ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ಹೋರಾಡುವ ವೇದಿಕೆಯಾಗಲಿದೆ ಎಂದು ಹೇಳಿದರು.

ಸಂವಿಧಾನದ ಆಶಯಗಳನ್ನು ಜನರ ನಡುವೆ ಬಲಪಡಿಸುವುದು ಹಾಗೂ ಜನಪರ ರಾಜಕೀಯಕ್ಕೆ ಹೊಸ ದಿಕ್ಕು ನೀಡುವುದು ಪಕ್ಷದ ಪ್ರಮುಖ ಉದ್ದೇಶವಾಗಿರಲಿದೆ ಎಂದು ಚೇತನ್ ಅಹಿಂಸಾ ತಿಳಿಸಿದರು.

ಸಭೆಯಲ್ಲಿ ಆಳಂದ ತಾಲೂಕಿನ ಮೂಲಭೂತ ಸಮಸ್ಯೆಗಳು, ಅಭಿವೃದ್ಧಿ ಕಾರ್ಯಗಳು, ಸಾಮಾಜಿಕ ನ್ಯಾಯ ಹಾಗೂ ಜನಪರ ಹೋರಾಟಗಳ ರೂಪುರೇಷೆಗಳ ಕುರಿತು ಚರ್ಚೆ ನಡೆಯಿತು. ಸ್ಥಳೀಯ ಸಮಸ್ಯೆಗಳಿಗೆ ಆದ್ಯತೆ ನೀಡಿ ಸಂಘಟಿತ ಹೋರಾಟ ರೂಪಿಸುವ ಬಗ್ಗೆ ಮುಖಂಡರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಸಭೆಯಲ್ಲಿ ಮಲ್ಲಿಕಾರ್ಜುನ ಶ್ರೀಂಗೇರಿ, ಲಕ್ಷ್ಮೀಕಾಂತ ಭಜನ, ಮಹಾದೇವ ಕಾಂಬಳೆ, ಬಾಬುರಾವ್ ಬೀಳಗಿ, ಅಂಬೇಶ ದೇವನೂರ, ರಫೀಕ್ ಕಿಂಗ್, ರಫೀಕ್ ಮುಲ್ಲಾ, ಯು.ಕೆ. ಇನಾಮದಾರ ಸೇರಿದಂತೆ ತಾಲೂಕಿನ ವಿವಿಧ ಸಂಘಟನೆಗಳ ಯುವ ಮುಖಂಡರು, ಸಾಮಾಜಿಕ ಹೋರಾಟಗಾರರು, ವಿಚಾರವಂತರು ಹಾಗೂ ಸಮಾನ ಮನಸ್ಕರು ಉಪಸ್ಥಿತರಿದ್ದರು.

ಮದರ್ ತೆರೇಸಾ ಆಸ್ಪತ್ರೆಯ ಸೇವಾ ಕಾರ್ಯಗಳಿಗೆ 10 ಲಕ್ಷ ರೂ. ಅನುದಾನ ಘೋಷಿಸಿದ ಶಾಸಕ ಬಸವರಾಜ ಮತ್ತಿಮಡು

ಕಲಬುರಗಿ ,ಸೆ.08-

ನಗರದ ಹೊರವಲಯದಲ್ಲಿರುವ ಮದರ್ ತೆರೇಸಾ ಆಸ್ಪತ್ರೆ ಆವರಣದಲ್ಲಿ ಸೋಮವಾರ ಅಂತರ್ಧರ್ಮೀಯ ಮದರ್ ತೆರೇಸಾ ಹಬ್ಬಾಚರಣೆ ಹಾಗೂ ಸಮಾಜಮುಖಿ ಸೇವಾ ಕಾರ್ಯಕ್ರಮಗಳು ವಿಜೃಂಭಣೆಯಿಂದ ನಡೆದವು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಗ್ರಾಮೀಣ ಕ್ಷೇತ್ರದ ಶಾಸಕ ಬಸವರಾಜ ಮತ್ತಿಮಡು ಮಾತನಾಡಿ, ಮದರ್ ತೆರೇಸಾ ಆಸ್ಪತ್ರೆ ಬಡವರು ಮತ್ತು ಗ್ರಾಮೀಣ ಜನರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸುವ ಮೂಲಕ ಸಮಾಜಕ್ಕೆ ಮಹತ್ವದ ಕೊಡುಗೆ ನೀಡುತ್ತಿದೆ ಎಂದು ಶ್ಲಾಘಿಸಿದರು.

ಆಸ್ಪತ್ರೆಯ ವಿವಿಧ ಜನಪರ ಚಟುವಟಿಕೆಗಳಿಗೆ ತಮ್ಮ ಶಾಸಕ ನಿಧಿಯಿಂದ 10 ಲಕ್ಷ ರೂ. ಅನುದಾನ ನೀಡುವುದಾಗಿ ಇದೇ ವೇಳೆ ಘೋಷಿಸಿದರು. ಸಂಸ್ಥೆಯ ಮನವಿ ಪತ್ರ ಸ್ವೀಕರಿಸಿದ ಅವರು, ಅಗತ್ಯ ಅನುದಾನ ಒದಗಿಸುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಾಬರ್ಟ್ ಮೈಕಲ್ ಮಿರಂದಾ ಅವರು ಮದರ್ ತೆರೇಸಾ ಅವರ ಮಾನವೀಯ ಸೇವೆ, ಕರುಣೆ ಮತ್ತು ಸಮಾಜದ ದುರ್ಬಲ ವರ್ಗಗಳಿಗಾಗಿ ಸಲ್ಲಿಸಿದ ಸೇವೆಯನ್ನು ಸ್ಮರಿಸಿ, ಸೇವಾ ಮನೋಭಾವವನ್ನು ಎಲ್ಲರೂ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಮಾನಸ ಜ್ಯೋತಿ, ಮದರ್ ಕೇರ್, ದಿವ್ಯ ಸ್ಪರ್ಶ ಮತ್ತು ಆರೋಗ್ಯ ಸಾಥಿ ಎಂಬ ನಾಲ್ಕು ನೂತನ ಸೇವಾ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಯಿತು. ಕಾರ್ಯಕ್ರಮದ ಆಯೋಜಕರಾದ ಫಾದರ್ ಅನೀಲ್ ವರ್ಗಿಸ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಮದರ್ ತೆರೇಸಾ ಸೇವಾ ಪ್ರಶಸ್ತಿಯನ್ನು ಆನಂದ ರಾಜ್, ಆಲೂರು ವೆಂಕಟ್, ವಿಲ್ಸನ್ ಪರೇರಾ, ಸೆಲೆನ್ ಡಿಸೋಜಾ, ಪತ್ರಕರ್ತ ರಾಜು ಕೋಸ್ಗಿ, ಜೆಸ್ಕಾಂ ಸಿಬ್ಬಂದಿ ಶೈಲೇಂದ್ರ ಹಾಗೂ ಸೈಯದ್ ಇಕ್ಬಾಲ್ ಅಲಿ ಅವರಿಗೆ ಪ್ರದಾನಿಸಲಾಯಿತು.

ಶೈಲಾಜ ಅವರು ಸಂವಿಧಾನದ ಪೀಠಿಕೆಯನ್ನು ವಾಚಿಸಿದರು. ಶೈಲೆನ್ ಡಿಸೋಜಾ ಸಂಸ್ಥೆಯ ವಿವಿಧ ಸೇವಾ ಕಾರ್ಯಗಳನ್ನು ಪರಿಚಯಿಸಿದರು. ಶ್ರೀರಾಮ ಶಾಲೆಯ ವಿದ್ಯಾರ್ಥಿಗಳ ಸಂಗೀತ ಮತ್ತು ನೃತ್ಯ ಪ್ರದರ್ಶನ ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿತ್ತು.

ಕ್ರಿಶ್ಚಿಯನ್ ಕಮಿಟಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಸಂಜಯ ಜಾಗಿರದಾರ್ ಮಾತನಾಡಿ, ಬಿಷಪ್ ಮೈಕಲ್ ಮಿರಂದಾ ಅವರ ಸಮಾಜಮುಖಿ ಸೇವೆಯನ್ನು ಗುರುತಿಸಿ ಕಲ್ಯಾಣ ಕರ್ನಾಟಕ ಉತ್ಸವದ ಸಂದರ್ಭದಲ್ಲಿ ಸರ್ಕಾರದಿಂದ ಗೌರವಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

ಬ್ರಿಮ್ಸ್ ಆಸ್ಪತ್ರೆಯಲ್ಲಿ ರೋಗಿಗಳಿಗೆ ಸೂಕ್ತ ಚಿಕಿತ್ಸೆ , ಗುಣಮಟ್ಟದ ಔಷಧಿ ನೀಡಲು ಆಗ್ರಹಿಸಿ ಮನವಿ

ಬೀದರ್ ,ಸೆ.08-

ಬ್ರಿಮ್ಸ್ ಬೋಧಕ ಆಸ್ಪತ್ರೆಯಲ್ಲಿ ಬಡ ರೋಗಿಗಳಿಗೆ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಸಿಗುತ್ತಿಲ್ಲ, ಗುಣಮಟ್ಟದ ಔಷಧಿಗಳನ್ನು ನೀಡಲಾಗುತ್ತಿಲ್ಲ ಎಂಬ ಆರೋಪಗಳ ಕುರಿತು ಉನ್ನತ ಮಟ್ಟದ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ ಶೆಟ್ಟಿ ಬಣ) ಸೋಮವಾರ ಮನವಿ ಸಲ್ಲಿಸಿದೆ.

ಬ್ರಿಮ್ಸ್ ಮುಖ್ಯ ಆಡಳಿತಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗೆ ಸಲ್ಲಿಸಿದ ಮನವಿಯಲ್ಲಿ, ಬೀದರ್ ಜಿಲ್ಲೆ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳು ಮತ್ತು ವಿವಿಧ ತಾಲೂಕುಗಳಿಂದ ಪ್ರತಿದಿನ ಸಾವಿರಾರು ಬಡ ರೋಗಿಗಳು ಚಿಕಿತ್ಸೆಗಾಗಿ ಬ್ರಿಮ್ಸ್ ಆಸ್ಪತ್ರೆಗೆ ಆಗಮಿಸುತ್ತಿದ್ದಾರೆ. ಆದರೆ ಅವರಿಗೆ ಸಮಯಕ್ಕೆ ಸರಿಯಾಗಿ ಸೂಕ್ತ ಚಿಕಿತ್ಸೆ ದೊರೆಯುತ್ತಿಲ್ಲ ಎಂಬ ದೂರುಗಳು ಕೇಳಿಬರುತ್ತಿವೆ ಎಂದು ಆರೋಪಿಸಲಾಗಿದೆ.

ಸರ್ಕಾರದಿಂದ ಕೋಟ್ಯಂತರ ರೂಪಾಯಿ ಅನುದಾನ ಬಿಡುಗಡೆಯಾಗುತ್ತಿದ್ದರೂ ಆಸ್ಪತ್ರೆಯಲ್ಲಿ ಕಳಪೆ ಗುಣಮಟ್ಟದ ಔಷಧಿಗಳನ್ನು ಖರೀದಿಸಲಾಗುತ್ತಿದೆ ಎಂಬ ಆರೋಪಗಳಿದ್ದು, ಈ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಲಾಗಿದೆ.



ಆಸ್ಪತ್ರೆಯ ಸ್ವಚ್ಛತೆ ನಿರ್ವಹಣೆಯಲ್ಲಿಯೂ ನಿರ್ಲಕ್ಷ್ಯ ಕಂಡುಬರುತ್ತಿದ್ದು, ರೋಗಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವಲ್ಲಿ ಆಡಳಿತ ವಿಫಲವಾಗಿದೆ ಎಂದು ಕರವೇ ಆರೋಪಿಸಿದೆ.

ಸರ್ಕಾರದ ಅನುಮತಿ ಪಡೆಯದೆ ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ ಎಂಬ ಆರೋಪಗಳ ಬಗ್ಗೆಯೂ ಉನ್ನತ ಮಟ್ಟದ ತನಿಖೆ ನಡೆಸಬೇಕು. ಬ್ರಿಮ್ಸ್ ಆಡಳಿತದ ಕಾರ್ಯವೈಖರಿಯನ್ನು ಪರಿಶೀಲಿಸಿ ಆರೋಪಗಳು ಸಾಬೀತಾದರೆ ಸಂಬಂಧಿಸಿದ ನಿರ್ದೇಶಕರು, ವೈದ್ಯರು ಹಾಗೂ ಸಿಬ್ಬಂದಿ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಈ ಕುರಿತು ಒಂದು ವಾರದೊಳಗೆ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಬ್ರಿಮ್ಸ್ ಆಸ್ಪತ್ರೆ ಎದುರು ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಕರ್ನಾಟಕ ರಕ್ಷಣಾ ವೇದಿಕೆ ಎಚ್ಚರಿಕೆ ನೀಡಿದೆ. ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷ ಪೀಟರ್ ಚಿಟಗುಪ್ಪಾ, ಜಿಲ್ಲಾ ಕಾರ್ಯಾಧ್ಯಕ್ಷ ಜಗನ್ನಾಥ್ ಕೌಠಾ, ಜಿಲ್ಲಾ ಸಂಚಾಲಕ ಬಸವರಾಜ್, ಜಿಲ್ಲಾ ಯುವ ಘಟಕ ಅಧ್ಯಕ್ಷ ಚಂದ್ರಕಾಂತ್ ಪೋಳ, ಬೀದರ್ ದಕ್ಷಿಣ ತಾಲೂಕು ಅಧ್ಯಕ್ಷ ನಿಲೇಶ್ ಠಾಠೋಡ್, ಜಿಲ್ಲಾ ಸಹ ಕಾರ್ಯದರ್ಶಿ ಮೊಜೆಸ್ ಅಣದೂರಕರ್, ಮೈಕಲ್ ಕಡ್ಯಾಳ, ಅಶೋಕ್ ಕಡ್ಯಾಳ, ದಿನೇಶ್ ಕಮಠಾಣ, ರಾಜು ಮೇಲದೊಡ್ಡಿ, ಜಾನ್ ಕಮಠಾಣ, ಪಿಂಟು ಸಿರ್ಸಿ, ಪ್ರಸಾದ್ ಘೋಡಂಪಳಿಕರ್, ಗಿರೀಶ್ ಓಂಕಾರ್, ಅಬ್ದುಲ್ ರಹೀಮ್, ಧನರಾಜ ಚಿಟ್ಟಾವಾಡಿ ಸೇರಿದಂತೆ ಇತರರು ಇದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಸಚಿವರ ಈ ಮನಸ್ಥಿತಿಯನ್ನು ಶುಚಿಗೊಳಿಸುವವರು ಯಾರು?

ಪೌರ ಕಾರ್ಮಿಕರ ಮುಂದೆ ಅನಾವರಣಗೊಂಡ ಸಚಿವ ಕೃಷ್ಣ ಬೈರೇಗೌಡರ ಫ್ಯೂಡಲ್ ಮನಸ್ಥಿತಿ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಸಚಿವರು ಪೌರ ಕಾರ್ಮಿಕರನ್ನು ತರಾಟೆಗೆ ತೆಗೆದುಕೊಂಡ ರೀತಿ, ಈ ಸಮಾಜ ಪೌರಕಾರ್ಮಿಕರ ಕುರಿತಂತೆ ಹೊಂದಿರುವ ಮನಸ್ಥಿತಿಗೆ ಕನ್ನಡಿ ಹಿಡಿದಿದೆ. ಭಾರತ ಚಂದ್ರನನ್ನು ತಲುಪಿದೆ ಎಂದು ಹೆಮ್ಮೆ ಪಡುತ್ತಿದ್ದೇವೆ. ಆದರೆ ದೇಶದಲ್ಲಿ ಮಲ ಹೊರುವ ಪದ್ಧತಿ ಮಾತ್ರ ಇನ್ನೂ ಜೀವಂತವಿದೆ. ಜಾತಿ ವ್ಯವಸ್ಥೆಯ ಸಾಮಾಜಿಕ ಅನಿಷ್ಟದ ಭಾಗವಾಗಿ, ಕೆಲವು ನಾಗರಿಕರು ಇನ್ನೂ ಮಾನವ ಘನತೆಗೆ ವಿರುದ್ಧವಾದ ಕೆಲಸವನ್ನು ಮಾಡುವಂತಾಗಿದೆ ಎಂದು ಎರಡು ದಿನಗಳ ಹಿಂದೆಯಷ್ಟೇ ಬಾಂಬೆ ಹೈಕೋರ್ಟ್ ಕಳವಳ ವ್ಯಕ್ತಪಡಿಸಿತ್ತು. ಭಾರತ ಯಾಕೆ ಇನ್ನೂ ಮಲಹೊರುವ ವ್ಯವಸ್ಥೆಯನ್ನು ಉಳಿಸಿಕೊಂಡಿದೆ ಎನ್ನುವುದಕ್ಕೆ ಕೃಷ್ಣ ಬೈರೇಗೌಡರ ಮಾತಿನಲ್ಲೇ ಉತ್ತರಗಳಿವೆ.

ಪೌರ ಕಾರ್ಮಿಕರು ಕೆಲಸಕ್ಕೆ ಸರಿಯಾಗಿ ಬರದಿದ್ದರೆ, ಬಂದರೂ ತಮ್ಮ ಕೆಲಸ ಮಾಡದೇ ಇದ್ದರೆ ನಗರವನ್ನು ಸ್ವಚ್ಛವಾಗಿಡುವುದು ಹೇಗೆ ಎಂಬುದು ಸಚಿವರ ಪ್ರಶ್ನೆ. ನಿಯಮಿತವಾಗಿ ಕರ್ತವ್ಯಕ್ಕೆ ಹಾಜರಾಗದವರನ್ನು ವಜಾಗೊಳಿಸುವ ಬಗ್ಗೆಯೂ ಅವರು ಎಚ್ಚರಿಕೆ ಕೊಟ್ಟಿದ್ದಾರೆ. ಕೆಲಸಕ್ಕೆ ಬರದೇ ಇರುವುದರಿಂದ ನಗರ ಕೊಳಚೆಯಿಂದ ನಾರುತ್ತಿದೆ. ಕೆಲಸಕ್ಕೆ ಸರಿಯಾಗಿ ಬರದವರನ್ನು ಏಕೆ ಖಾಯಂಗೊಳಿಸಬೇಕು ಎಂದು ಕೇಳಿದ್ದಾರೆ. ಸಚಿವರ ತರಾಟೆಯಲ್ಲಿ ಸತ್ಯ ಇದ್ದಿರಲೂಬಹುದು. ಕನಿಷ್ಠ ಅನುಮತಿಯನ್ನೂ ಪಡೆಯದೆ ಶೇ.30ರಷ್ಟು ಪೌರ ಕಾರ್ಮಿಕರು ಕೆಲಸಕ್ಕೆ ಬರದೇ ಇರುವುದನ್ನು ಗಮನಿಸಿದ್ದಾರೆ. ಇದು ನಿತ್ಯವೂ ನಡೆಯುತ್ತಿರುವುದರ ಬಗ್ಗೆ, ಕೇಳಿದರೆ ಅಥವಾ ಸಂಬಳ ಕಡಿತಗೊಳಿಸಿದರೆ ಧರಣಿಯಂಥ ಒತ್ತಡ ತಂತ್ರಕ್ಕೆ ಮುಂದಾಗುವ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದಾರೆ. ಈ ವಸ್ತುಸ್ಥಿತಿ ಕಣ್ಣೆದುರಿಗಿದ್ದ ಹೊತ್ತಲ್ಲೇ ಕೆಲಸ ಖಾಯಮಾತಿಗಾಗಿ ಪೌರ ಕಾರ್ಮಿಕರು ಮನವಿ ಕೊಡಲು ಬಂದಿದ್ದಾರೆ ಮತ್ತು ಅವರು ಸಚಿವರ ಆಕ್ರೋಶಕ್ಕೆ ತುತ್ತಾದ ಪ್ರಸಂಗ ನಡೆದಿದೆ.

ಯಾವುದೇ ನಗರವೊಂದರ ಒಟ್ಟು ವ್ಯವಸ್ಥೆಯಲ್ಲಿ ಪೌರ ಕಾರ್ಮಿಕರು ಬಹಳ ಮುಖ್ಯ ಎಂಬುದನ್ನು ಅಲ್ಲಗಳೆಯುವಂತಿಲ್ಲ. ಪೌರ ಕಾರ್ಮಿಕರಿಲ್ಲದೆ ನಗರ ಸ್ವಚ್ಛವಾಗಿ, ಸುಂದರವಾಗಿ ಮತ್ತು ಆರೋಗ್ಯಪೂರ್ಣವಾಗಿ ಇರಲು ಸಾಧ್ಯವಿಲ್ಲ. ಒಂದು ಮನೆಯೊಳಗೆ ಎಲ್ಲವೂ ಸುಸ್ಥಿತಿಯಲ್ಲಿದೆ ಎಂದರೆ, ಅದನ್ನೆಲ್ಲ ನೋಡಿಕೊಳ್ಳುವ ಒಂದು ಮನಸ್ಸು ಅಲ್ಲಿ ನಿರಂತರವಾಗಿ ಸಕ್ರಿಯವಾಗಿದೆ ಎಂದರ್ಥ. ಹಾಗೆಯೇ, ಬೆಂಗಳೂರಿನಂಥ ಒಂದು ನಗರ ಲಕ್ಷಣವಾಗಿರಲು ಅದರ ಹಿಂದೆ ದುಡಿಯುವ ಅದೆಷ್ಟೋ ಕೈಗಳಿವೆ. ಅಂಥ ಕೈಗಳಲ್ಲಿ, ಕರ್ನಾಟಕದಾದ್ಯಂತದ ಸುಮಾರು 42,000 ಪೌರ ಕಾರ್ಮಿಕರೂ ಸೇರುತ್ತಾರೆ. ಪೌರ ಕಾರ್ಮಿಕರು ಎದುರಿಸುತ್ತಿರುವ ಸಮಸ್ಯೆಗಳೂ ಹಲವು. ತಾವು ಮಾಡಬೇಕಿರುವ ಕೆಲಸದ ಕಾರಣಕ್ಕಾಗಿಯೇ ಅವರು ತೀವ್ರ ಆರೋಗ್ಯ ಸಮಸ್ಯೆಗಳಿಗೆ ತುತ್ತಾಗುತ್ತಾರೆ. ಕಸ, ಧೂಳು ಮತ್ತು ರಾಸಾಯನಿಕಗಳ ಮಧ್ಯೆ ಕೆಲಸ ಮಾಡುವುದರಿಂದ ಉಸಿರಾಟದ ತೊಂದರೆ, ಸಂಧಿವಾತ, ಚರ್ಮದ ಕಾಯಿಲೆಗಳು ಅವರನ್ನು ಕಾಡುತ್ತವೆ. ಅನೇಕ ಕಡೆಗಳಲ್ಲಿ ಇಂದಿಗೂ ಪೌರ ಕಾರ್ಮಿಕರಿಗೆ ಗುಣಮಟ್ಟದ ಕೈಗವಸು, ಮಾಸ್ಕ್ ಮತ್ತು ಬೂಟುಗಳನ್ನು ನಿಯಮಿತವಾಗಿ ವಿತರಿಸುತ್ತಿಲ್ಲ ಎಂಬ ದೂರುಗಳಿವೆ. ಖಾಯಂಗೊಂಡ ಪೌರ ಕಾರ್ಮಿಕರಿಗೆ ಉತ್ತಮ ಅನುಕೂಲಗಳಿದ್ದರೂ, ಗುತ್ತಿಗೆ ಅಥವಾ ದಿನಗೂಲಿ ಆಧಾರದ ಮೇಲೆ ಕೆಲಸ ಮಾಡುತ್ತಿರುವವರು ಆರ್ಥಿಕ ಅಭದ್ರತೆಯನ್ನು ಎದುರಿಸುತ್ತಾರೆ. ಇನ್ನೊಂದೆಡೆ, ಸ್ವಚ್ಛತಾ ಕೆಲಸವನ್ನು ಒಂದು ನಿರ್ದಿಷ್ಟ ಸಮುದಾಯಕ್ಕೆ ಸೀಮಿತಗೊಳಿಸಿ ನೋಡುವ ಸಾಮಾಜಿಕ ವ್ಯವಸ್ಥೆಯಲ್ಲಿ ತಾರತಮ್ಯದ ದೃಷ್ಟಿಗೆ ತುತ್ತಾಗಿದ್ದೇವೆಂಬ ಸಂಕಟವೂ ಅವರಲ್ಲಿದೆ. ಇವತ್ತಿನ ಬದಲಾಗುತ್ತಿರುವ ದಿನಮಾನಗಳಲ್ಲಿ ಬಹಳಷ್ಟು ಸುಧಾರಣೆ ಕಂಡಿದ್ದರೂ, ಘನತೆಯ ಬದುಕಿನ ಹಂಬಲ ಹಾಗೆಯೇ ಉಳಿದಿದೆ. ಸರಕಾರ ಮತ್ತು ಸಂಘಟನೆಗಳು ಪೌರ ಕಾರ್ಮಿಕರ ಸ್ಥಿತಿ ಸುಧಾರಣೆಗೆ ಪ್ರಯತ್ನಿಸುತ್ತಲೇ ಇವೆ. ಕಳೆದ ವರ್ಷ ಕಾರ್ಮಿಕರ ದಿನದಂದೇ 12 ಸಾವಿರ ಪೌರಕಾರ್ಮಿಕರನ್ನು ಇದೇ ಕಾಂಗ್ರೆಸ್ ಸರಕಾರ ಖಾಯಂಗೊಳಿಸಿದೆ. ಇನ್ನೂ 9 ಸಾವಿರ ನೌಕರರ ಸೇವೆ ಖಾಯಂಗೊಳಿಸುವ ಭರವಸೆಯನ್ನೂ ನೀಡಿದೆ. ಮಧ್ಯವರ್ತಿಗಳ ಕಾಟ ತಪ್ಪಿಸಲು ನೇರ ವೇತನ ಪಾವತಿ ವ್ಯವಸ್ಥೆಯನ್ನೂ ಜಾರಿಗೊಳಿಸಲಾಗಿದೆ. ಪೌರ ಕಾರ್ಮಿಕರ ಹಕ್ಕುಗಳು ಮತ್ತು ಕಲ್ಯಾಣಕ್ಕಾಗಿ ಕಾನೂನು ರಕ್ಷೆಯೂ ಇದೆ.

ಎಲ್ಲ ವೃತ್ತಿಯಂತಲ್ಲ ಪೌರ ಕಾರ್ಮಿಕರ ಕೆಲಸ. ಆ ಕೆಲಸಕ್ಕೆ ಎಲ್ಲ ಜಾತಿ, ವರ್ಗದ ಜನರು ತಾಮುಂದು ಎಂದು ಬರುವುದಿಲ್ಲ. ಈ ಕೆಲಸದ ಜೊತೆಗೆ ಜಾತಿ ವ್ಯವಸ್ಥೆಯೂ ಸುತ್ತಿಕೊಂಡಿದೆ. ಈ ಕೆಲಸದ ಮೂಲಕವೇ ಅವರ ಸಾಮಾಜಿಕ ಸ್ಥಾನಮಾನವನ್ನು ಸಮಾಜ ನಿರ್ಧರಿಸುತ್ತದೆ. ಆದುದರಿಂದಲೇ ಪೌರ ಕಾರ್ಮಿಕರ ಜೊತೆಗೆ ಅತ್ಯಂತ ಮಾನವೀಯವಾಗಿ ವರ್ತಿಸುವುದು ಸಚಿವರು, ಅಧಿಕಾರಿಗಳ ಹೊಣೆಗಾರಿಕೆಯಾಗಿದೆ. ಪೌರ ಕಾರ್ಮಿಕರ ಬಗ್ಗೆ ಅಧಿಕಾರಿಗಳು ಕಿವಿಯೂದಿದ್ದನ್ನು ಗಂಭೀರವಾಗಿ ತೆಗೆದುಕೊಂಡು ಸಾರ್ವಜನಿಕವಾಗಿ ಕಾರ್ಮಿಕರ ಜೊತೆಗೆ ಸಂವೇದನಾ ಹೀನ ಮಾತುಗಳನ್ನಾಡುವುದು ಸಚಿವರಾಗಿ ಕೃಷ್ಣ ಬೈರೇಗೌಡರಿಗೆ ಶೋಭೆ ತರುವುದಿಲ್ಲ. ಪೌರ ಕಾರ್ಮಿಕರು ಸರಿಯಾಗಿ ಕೆಲಸಕ್ಕೆ ಹಾಜರಾಗುವುದಿಲ್ಲ ಎಂದಾದರೆ, ಅದಕ್ಕೆ ಕಾರಣಗಳೇನು ಎನ್ನುವುದನ್ನು ಅವರು ಕಂಡುಕೊಳ್ಳಬೇಕು. ಅವರ ವೈಯಕ್ತಿಕ ಸಮಸ್ಯೆಗಳ ಬಗ್ಗೆ ಕಾರ್ಮಿಕರ ಜೊತೆಗೆ ಚರ್ಚಿಸಬೇಕು. ಪ್ರತಿ ದಿನ ಕಸ, ಕೊಳಚೆಗಳ ನಡುವೆ ಬದುಕುವ ಈ ಕಾರ್ಮಿಕರ ಆರೋಗ್ಯ ಪದೇ ಪದೇ ಕೆಡುತ್ತದೆ. ಇವರ ಆರೋಗ್ಯದ ಮೇಲೆ ಕಾಳಜಿಯಿಂದ ಸರಕಾರ ಏನೇನು ಕ್ರಮ ತೆಗೆದುಕೊಂಡಿದೆ, ಏನೇನು ಸೌಲಭ್ಯಗಳನ್ನು ನೀಡುತ್ತಾ ಬಂದಿದೆ ಎನ್ನುವುದರ ಬಗ್ಗೆ ಅಧಿಕಾರಿಗಳ ಜೊತೆಗೆ ಮಾತನಾಡಬೇಕು. ಪೌರ ಕಾರ್ಮಿಕರು ಕೆಲಸ ಮಾಡುವ ಸಂದರ್ಭದಲ್ಲಿ ಅವರಿಗೆ ಅತ್ಯಾಧುನಿಕ ಸಲಕರಣೆಗಳನ್ನು ಸರಕಾರ ಎಷ್ಟರ ಮಟ್ಟಿಗೆ ಒದಗಿಸುತ್ತಿದೆ ಎನ್ನುವುದರ ಬಗ್ಗೆ ವಿಚಾರಣೆ ನಡೆಸಲಿ. ಸರಕಾರ ದಾಖಲೆಗಳಲ್ಲಿ ಪೌರಕಾರ್ಮಿಕರಿಗೆ ನೀಡುತ್ತಿದ್ದೇವೆ ಎನ್ನುವ ಸವಲತ್ತುಗಳು ನಿಜಕ್ಕೂ ತಲುಪುತ್ತಿದೆಯೇ ಎನ್ನುವ ಬಗ್ಗೆ ಸಚಿವರು ಮೊದಲು ವಿಚಾರಣೆ ನಡೆಸಬೇಕು. ಆದರೆ ಸಚಿವರಿಗೆ ಪೌರಕಾರ್ಮಿಕರು ಆಲಸಿ, ಸೋಮಾರಿಗಳಾಗಿ ಭಾಸವಾಗಿದ್ದಾರೆ. ಇದು ಫ್ಯೂಡಲ್ ಮನಸ್ಥಿತಿಯೇ ಹೊರತು ಇನ್ನೇನೂ ಅಲ್ಲ. ಕೊಳಚೆಗಳನ್ನು ಎತ್ತುವುದು ನಿಮ್ಮ ಕರ್ತವ್ಯ ಎಂದು ಕಾರ್ಮಿಕರಿಗೆ ನೆನಪಿಸುವಂತಿದೆ ಸಚಿವರ ಮಾತುಗಳು.

ತಳಸ್ತರದ ಜನರ ಬದುಕಿನ ಕುರಿತಂತೆ ಸಚಿವ ಕೃಷ್ಣ ಬೈರೇಗೌಡರ ಸಂವೇದನಾ ಹೀನ ನಡವಳಿಕೆ ಹೊಸತೇನಲ್ಲ. ಬೀದಿ ಬದಿ ವ್ಯಾಪಾರಿಗಳ ವಿಷಯದಲ್ಲೂ ಇಷ್ಟೇ ಅಸೂಕ್ಷ್ಮವಾಗಿ ವರ್ತಿಸಿದ್ದಾರೆ. ನಗರ ಹೊಲಸೆದ್ದು ಹೋಗಿದ್ದರೆ ಅದನ್ನು ಗುಡಿಸಲು ಪೌರಕಾರ್ಮಿಕರೇ ಸಚಿವರಿಗೆ ಯಾಕೆ ಬೇಕು? ನಗರದ ಮೇಲ್‌ಸ್ತರದ ತರುಣರಿಗೆ ವಾರಕ್ಕೊಂದು ದಿನ ನಗರವನ್ನು ಗುಡಿಸುವ ಹೊಣೆಗಾರಿಕೆಯನ್ನು ನೀಡಲಿ. ಹಾಗೆಯೇ ನಗರವನ್ನು ಪೌರಕಾರ್ಮಿಕರು ಸ್ವಚ್ಛವಾಗಿಟ್ಟಷ್ಟು ಅದನ್ನು ಹೊಲಸೆಬ್ಬಿಸುವ ಮೇಲ್ ಸ್ತರದ ಜನರನ್ನು ತರಾಟೆಗೆ ತೆಗೆದುಕೊಳ್ಳುವ ಎದೆಗಾರಿಕೆಯನ್ನು ಮೊದಲು ಸಚಿವರು ಪ್ರದರ್ಶಿಸಬೇಕು. ಪೌರಕಾರ್ಮಿಕರನ್ನು ಸಾರ್ವಜನಿಕವಾಗಿ ನಿಂದಿಸಿದ್ದಕ್ಕಾಗಿ ಸಚಿವರು ಕ್ಷಮೆಯಾಚಿಸಬೇಕು ಮಾತ್ರವಲ್ಲ, ಪೌರಕಾರ್ಮಿಕರ ಬೇಡಿಕೆಗಳನ್ನು ಈಡೇರಿಸಲು ಪ್ರಾಮಾಣಿಕ ಪ್ರಯತ್ನಗಳನ್ನು ಮಾಡುವ ಭರವಸೆಯನ್ನು ನೀಡಬೇಕು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ರಾಜ್ಯದಲ್ಲಿ 3ನೇ ಅತಿ ತೀವ್ರತೆಯ ಬರ ಪರಿಸ್ಥಿತಿ!

ಬೆಂಗಳೂರು: ರಾಜ್ಯದಲ್ಲಿ ಈ ಬಾರಿ ಮುಂಗಾರು ಮಳೆ ಕೊರತೆಯಿಂದ ತೀವ್ರ ಬರದ ಛಾಯೆ ಆವರಿಸಿದೆ. ಈಗಾಗಲೇ ರಾಜ್ಯ ಸರ್ಕಾರ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿ ಆದೇಶ ಹೊರಡಿಸಿದೆ. ಆದರೆ, ಇನ್ನೂ ಕೆಲ ತಾಲೂಕುಗಳು ಬರದ ಪಟ್ಟಿಗೆ ಸೇರ್ಪಡೆಯಾಗುವ ಸಾಧ್ಯತೆ ಇದೆ ಎಂದು ಸಚಿವರು ಹೇಳುತ್ತಿದ್ದಾರೆ. ಬರ ನಿರ್ವಹಣೆಗೆ ಮುಂದಾಗಿರುವ ರಾಜ್ಯ ಸರ್ಕಾರವು, ಪರಿಹಾರ ಸಂಬಂಧ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲು ಸಿದ್ಧತೆ ಮಾಡಿಕೊಂಡಿದೆ. ರಾಜ್ಯದಲ್ಲಿನ ಬರದ ಪರಿಸ್ಥಿತಿ ಏನಿದೆ? ಎಂಬುದರ ಸಮಗ್ರ ವರದಿ ಇಲ್ಲಿದೆ.

ರಾಜ್ಯ ಈ ಬಾರಿ ತೀವ್ರ ಬರಗಾಲದ ಪರಿಸ್ಥಿತಿ ಎದುರಿಸುತ್ತಿದೆ. ಎರಡು ಜಿಲ್ಲೆಗಳನ್ನು ಬಿಟ್ಟರೆ ಉಳಿದ 29 ಜಿಲ್ಲೆಗಳಲ್ಲಿ ಮಳೆ ಕೈಕೊಟ್ಟಿದೆ. ಈ ಬಾರಿ ಮುಂಗಾರು ಅವಧಿಯಲ್ಲಿ ಈವರೆಗೆ ಶೇ.31 ರಷ್ಟು ಮಳೆ ಕೊರತೆಯಾಗಿದೆ. 1976ರ ನಂತರ ಜೂನ್ 1ರಿಂದ ಆಗಸ್ಟ್ ವರೆಗೆ ಸರಾಸರಿ ಅತ್ಯಂತ ಕಡಿಮೆ ಮಳೆಯಾಗಿದೆ. 2023ರಲ್ಲಿನ ಉಂಟಾದ ಬರ ಪರಿಸ್ಥಿತಿಗಿಂತಲೂ ಈ ಬಾರಿ ಸ್ಥಿತಿ ಕೆಟ್ಟದಾಗಿದೆ. 2012ರಲ್ಲಿ ರಾಜ್ಯದಲ್ಲಿ ಅತ್ಯಂತ ತೀವ್ರ ಬರಗಾಲ ಎದುರಾಗಿತ್ತು. 2002ರಲ್ಲಿ ರಾಜ್ಯ ಎರಡನೇ ಅತಿ ದೊಡ್ಡ ಬರ ಪರಿಸ್ಥಿತಿ ಎದುರಿಸಿತ್ತು. ಅದಾದ ಬಳಿಕ ಈಗ 2026ರಲ್ಲೇ ರಾಜ್ಯ ಮೂರನೇ ಅತಿ ತೀವ್ರತೆಯ ಬರಗಾಲ ಎದುರಿಸುತ್ತಿದೆ ಎಂದು ಕಂದಾಯ ಇಲಾಖೆ ಕಾರ್ಯದರ್ಶಿ ಮನೋಜ್ ಕುಮಾರ್ ಮೀನಾ ತಿಳಿಸಿದ್ದಾರೆ.



ರಾಜ್ಯದಲ್ಲಿ ಈ ಬಾರಿ ಶೇ. 31ರಷ್ಟು ಮಳೆ ಕೊರತೆ: ರಾಜ್ಯದಲ್ಲಿ ಜೂನ್ 1ರಿಂದ ಆಗಸ್ಟ್ 26ರವರೆಗೆ 666 ಮಿಲಿ ಮೀಟರ್ ಮಳೆಯಾಗಬೇಕಾದ ಕಡೆ ಕೇವಲ 464 ಮಿ.ಮೀ. ಮಳೆಯಾಗಿದೆ. ಆ ಮೂಲಕ ಶೇ.31 ರಷ್ಟು ಮಳೆ ಕೊರತೆಯಾಗಿದೆ ಎಂದು ಕಂದಾಯ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಈ ಪೈಕಿ ರಾಜ್ಯದ ಉತ್ತರ ಒಳನಾಡು ಜಿಲ್ಲೆಗಳಾದ ಬಳ್ಳಾರಿ, ಕೊಪ್ಪಳ, ವಿಜಯನಗರ, ರಾಯಚೂರು, ಕಲಬುರಗಿ, ಯಾದಗಿರಿ, ಬೀದರ್, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಗದಗ, ಹಾವೇರಿ, ಧಾರವಾಡದಲ್ಲಿ ಶೇ.31ರಷ್ಟು ಮಳೆ ಕೊರತೆಯಾಗಿದೆ. ಇನ್ನು ದಕ್ಷಿಣ ಒಳನಾಡು ಜಿಲ್ಲೆಗಳಾದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ, ದಾವಣಗೆರೆ, ಚಾಮರಾಜನಗರ, ಮೈಸೂರು, ಮಂಡ್ಯದಲ್ಲಿ ಶೇ.41ರಷ್ಟು ಮಳೆ ಕೊರತೆಯಾಗಿದೆ. ಇನ್ನು ಮಲೆನಾಡಿನ ಜಿಲ್ಲೆಗಳಲ್ಲಿ ಶೇ.35 ಕರಾವಳಿಯಲ್ಲಿ ಶೇ.24ರಷ್ಟು ಮಳೆ ಕೊರತೆಯಾಗಿದೆ. ರಾಜ್ಯದ 29 ಜಿಲ್ಲೆಗಳ 190 ತಾಲೂಕುಗಳು ಮಳೆ ಕೊರತೆ ಮತ್ತು ತೀವ್ರ ಮಳೆ ಕೊರತೆಯ ವ್ಯಾಪ್ತಿಯಲ್ಲಿದೆ ಎಂದು ಪರಮೇಶ್ವರ್ ಮಾಹಿತಿ ನೀಡಿದ್ದಾರೆ.

ಜೂನ್‌ನಲ್ಲಿ ರಾಜ್ಯ 199 ಮಿ.ಮೀ ಸಾಮಾನ್ಯ ಮಳೆಗೆ ಪ್ರತಿಯಾಗಿ 116 ಮಿಮೀ ಮಳೆ ಆಗಿದೆ. ಶೇ.42 ರಷ್ಟು ಕೊರತೆ ದಾಖಲಿಸಿದೆ. ಜೂನ್ ತಿಂಗಳು ಕಳೆದ 50 ವರ್ಷಗಳಲ್ಲಿ (1976-2026) ನಾಲ್ಕನೇ ಅತಿ ಕಡಿಮೆ ಮಳೆಯನ್ನು ದಾಖಲಿಸಿದ ತಿಂಗಳಾಗಿದೆ. ಜುಲೈನಲ್ಲಿ 271 ಮಿ.ಮೀ ಸಾಮಾನ್ಯ ಮಳೆಯ ಮುಂದೆ 192 ಮಿಮೀ ಮಳೆ ಆಗಿದ್ದು, ಶೇ.29 ರಷ್ಟು ಕೊರತೆ ಕಂಡಿದೆ. ಜೂನ್ 1 ರಿಂದ ಆಗಸ್ಟ್ 12 ರವರೆಗಿನ 73 ದಿನಗಳ ಅವಧಿಯಲ್ಲಿ 43 ದಿನಗಳಲ್ಲಿ ರಾಜ್ಯ ಭಾರಿ ಮಳೆ ಕೊರತೆ ಕಂಡಿದೆ. ಜೂನ್ 1 ರಿಂದ ಆಗಸ್ಟ್ 21ರ ವರೆಗಿನ ಅವಧಿಯಲ್ಲಿ 29 ಜಿಲ್ಲೆಗಳು ಮಳೆ ಕೊರತೆಯ ವರ್ಗದಲ್ಲಿದ್ದರೆ, ಕೇವಲ 2 ಜಿಲ್ಲೆಗಳು ಮಾತ್ರ ಸಾಮಾನ್ಯ ವರ್ಗದಲ್ಲಿವೆ. 176 ತಾಲೂಕುಗಳು ಕೊರತೆ ವರ್ಗದಲ್ಲಿದ್ದರೆ ಮತ್ತು 15 ತಾಲೂಕುಗಳು ಭಾರಿ ಕೊರತೆ ವರ್ಗದಲ್ಲಿವೆ. ಹಾಗೂ ಕೇವಲ 49 ತಾಲೂಕುಗಳು ಮಾತ್ರ ಸಾಮಾನ್ಯದಿಂದ ಹೆಚ್ಚುವರಿ ಮಳೆಯ ವರ್ಗದಲ್ಲಿವೆ.

101 ತಾಲೂಕುಗಳು ಬರಪೀಡಿತ: ಸದ್ಯ ರಾಜ್ಯದ 24 ಜಿಲ್ಲೆಗಳಲ್ಲಿನ 101 ತಾಲೂಕುಗಳನ್ನು ಬರ ಪೀಡಿತ ಎಂದು ಸರ್ಕಾರ ಘೋಷಣೆ ಮಾಡಿದೆ. ಈ ಪೈಕಿ 89 ತಾಲೂಕುಗಳು ತೀವ್ರ ಬರ ಪೀಡಿತ ತಾಲೂಕುಗಳಾಗಿದ್ದರೆ, 12 ತಾಲೂಕುಗಳು ಸಾಧಾರಣ ಬರ ಪೀಡಿತ ಎಂದು ಗುರುತಿಸಲಾಗಿದೆ. ಕೇಂದ್ರ ಸರ್ಕಾರದ ಬರ ಮಾರ್ಗಸೂಚಿ 2020 ಪ್ರಕಾರ ರಾಜ್ಯದಲ್ಲಿ ಆಗಸ್ಟ್ 26ರ ವೇಳೆಗೆ ಮಳೆಯಿಲ್ಲದೆ ಸತತ ಮೂರು ಅಥವಾ ಅದಕ್ಕಿಂತ ಹೆಚ್ಚು ವಾರಗಳ ಕಾಲ ಒಣಹವೆ (ಡ್ರೈ ಸ್ಪೆಲ್) ಅನುಭವಿಸಿದ 134 ತಾಲೂಕುಗಳನ್ನು ಗುರುತಿಸಲಾಗಿದೆ. ಮಾನದಂಡದ ಪ್ರಕಾರ 134 ತಾಲೂಕುಗಳಲ್ಲಿ ಗ್ರೌಂಡ್ ಟ್ರೂಥಿಂಗ್ (ವಾಸ್ತವತೆ ಪರಿಶೀಲನೆ) ಮಾಡಲಾಗಿದ್ದು, ಅದರಂತೆ 101 ತಾಲೂಕುಗಳನ್ನು ಬರ ಪೀಡಿತ ಎಂದು ಘೋಷಿಸಲಾಗಿದೆ.

89 ತೀವ್ರ ಬರಪೀಡಿತ ತಾಲೂಕುಗಳು: ಬೆಂಗಳೂರು ನಗರ ಜಿಲ್ಲೆಯ 4 ತಾಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 2, ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ 2, ಕೋಲಾರ ಜಿಲ್ಲೆಯ 6, ಚಿಕ್ಕಬಳ್ಳಾಪುರ ಜಿಲ್ಲೆಯ 8, ತುಮಕೂರು ಜಿಲ್ಲೆಯ 9 ತಾಲೂಕುಗಳು, ಚಿತ್ರದುರ್ಗ ಜಿಲ್ಲೆ 3, ದಾವಣಗೆರೆ 3, ಚಾಮರಾಜನಗರ ಜಿಲ್ಲೆಯ 5, ಮೈಸೂರು ಜಿಲ್ಲೆಯ 8, ಮಂಡ್ಯ ಜಿಲ್ಲೆಯ 5, ಬಳ್ಳಾರಿ ಜಿಲ್ಲೆಯ 4, ಕೊಪ್ಪಳ ಜಿಲ್ಲೆಯ 3, ರಾಯಚೂರು ಜಿಲ್ಲೆಯ 3, ಬೀದರ್ ಜಿಲ್ಲೆಯ 4, ಬಾಗಲಕೋಟೆ ಜಿಲ್ಲೆಯ 5, ವಿಜಯಪುರ ಜಿಲ್ಲೆಯ 3, ಗದಗ ಜಿಲ್ಲೆಯ 1, ಹಾಸನ ಜಿಲ್ಲೆಯ 5, ಚಿಕ್ಕಮಗಳೂರು ಜಿಲ್ಲೆಯ 1, ಯಾದಗಿರಿ ಜಿಲ್ಲೆಯ 1, ವಿಜಯನಗರ ಜಿಲ್ಲೆಯ 4 ತಾಲೂಕುಗಳು ತೀವ್ರ ಬರ ಪೀಡಿತ ಎಂದು ಘೋಷಿಸಲಾಗಿದೆ.

ಇನ್ನು ಘೋಷಿಸಲ್ಪಟ್ಟ ಸಾಧಾರಣ ಬರಪೀಡಿತ 12 ತಾಲೂಕುಗಳಲ್ಲಿ ಬೆಂಗಳೂರು ನಗರ ಜಿಲ್ಲೆ- 1, ದಾವಣಗೆರೆ ಜಿಲ್ಲೆ - 1, ಮಂಡ್ಯ ಜಿಲ್ಲೆ - 2, ರಾಯಚೂರು ಜಿಲ್ಲೆ - 2, ಚಿಕ್ಕಮಗಳೂರು ಜಿಲ್ಲೆ- 3, ಕೊಡಗು ಜಿಲ್ಲೆ - 1, ಉತ್ತರ ಕನ್ನಡ ಜಿಲ್ಲೆಯ - 2 ತಾಲೂಕುಗಳಿವೆ.

ಬರ ಘೋಷಣೆ ಕಾರ್ಯವಿಧಾನ ಏನಿದೆ? ಕೇಂದ್ರ, ಸರ್ಕಾರದ ಬರ ಮಾರ್ಗಸೂಚಿ- 2020ರ ಪ್ರಕಾರ ಬರಪೀಡಿತ ತಾಲೂಕು ಎಂದು ಘೋಷಿಸಲಾಗುತ್ತದೆ. ಪ್ರಮುಖವಾಗಿ ಎರಡು ಟ್ರಿಗರ್ ಪಾಯಿಂಟುಗಳನ್ನು ಪರಿಗಣಿಸಿ ಬರ ಪರಸ್ಥಿತಿಯನ್ನು ಅವಲೋಕಿಸಲಾಗುತ್ತಿದೆ. ಅದರಂತೆ ಟ್ರಿಗರ್-1ರಲ್ಲಿ ಮೂರು ಅಥವಾ ಅದಕ್ಕಿಂತ ಹೆಚ್ಚಿನ ವಾರಗಳಲ್ಲಿ ಮಳೆಯಾಗದಿದ್ದರೆ ಅದನ್ನು ಡ್ರೈ ಸ್ಪೆಲ್ ವೀಕ್ (ವಾಡಿಕೆಗಿಂತ ಶೇ.15 ಕಡಿಮೆ ಮಳೆ) ಎಂದು ಪರಿಗಣಿಸಲಾಗುತ್ತದೆ. ಅಂತಹ ತಾಲೂಕುಗಳನ್ನು ಬರ ಪೀಡಿತ ಎಂದು ಪರಿಗಣಿಸಲಾಗುತ್ತದೆ. ಇನ್ನು ಟ್ರಿಗರ್-2ರಂತೆ ಬಿತ್ತನೆಯ ಪ್ರಮಾಣ, ಬಿತ್ತಿದ ಬೆಳೆಗಳ ಸ್ಥಿತಿಗತಿ, ಮಣ್ಣಿನ ತೇವಾಂಶ, ಅಂತರ್ಜಲ ಪ್ರಮಾಣ, ಕೆರೆಕಟ್ಟೆಗಳಲ್ಲಿ, ಅಣೆಕಟ್ಟುಗಳಲ್ಲಿನ ನೀರಿನ ಪ್ರಮಾಣಗಳನ್ನು ಪರಿಗಣಿಸಲಾಗುತ್ತದೆ.

ಈ ಎರಡೂ ಟ್ರಿಗರ್ ಅಂಶಗಳನ್ನು ಪರಿಗಣಿಸಿ ಪರಿಶೀಲನೆ ನಡೆಸಲಾಗುತ್ತದೆ. ಗ್ರೌಂಡ್ ಟ್ರೂಥಿಂಗ್ ಮಾಡಲಾಗುತ್ತದೆ. ಅದರಂತೆ 134 ತಾಲೂಕುಗಳು ಟ್ರಿಗರ್-1ಗೆ ಅರ್ಹತೆ ಪಡೆದಿವೆ. ಗ್ರೌಂಡ್ ಟ್ರೂಥಿಂಗ್ ಮಾಡಿದಾಗ ಸದ್ಯಕ್ಕೆ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಉಳಿದ 32 ತಾಲೂಕುಗಳು ಟ್ರಿಗರ್-2ರಲ್ಲಿ ಅರ್ಹತೆ ಪಡೆದಿದ್ದು, ಪರಿಶೀಲನೆ ನಡೆಯುತ್ತಿದೆ ಎಂದು ಕಂದಾಯ ಸಚಿವ ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಗ್ರೌಂಡ್ ಟ್ರೂಥಿಂಗ್ ಮಾಡುವಾಗ ಟ್ರಿಗರ್-1ರ ಪ್ರಕಾರ ಅರ್ಹತೆ ಪಡೆಯುವ ತಾಲೂಕಿನಲ್ಲಿ 10 ಗ್ರಾಮಗಳನ್ನು ರ್ಯಾಂಡಮ್ ಆಗಿ ತಂತ್ರಾಂಶದ ಮೂಲಕ ಆಯ್ಕೆ ಮಾಡಲಾಗುತ್ತದೆ. ಜೊತೆಗೆ ಆ ಗ್ರಾಮದ ಪ್ರಮುಖ 5 ಬೆಳೆಗಳನ್ನು ಆಯ್ಕೆ ಮಾಡಲಾಗುತ್ತದೆ. ಆ ನಂತರ ಪರಿಶೀಲನೆ ಮಾಡಿ, ವಾಸ್ತವ ಚಿತ್ರಣ ಪಡೆಯಲಾಗುತ್ತದೆ ಎಂದು ಕಂದಾಯ ಇಲಾಖೆ ಕಾರ್ಯದರ್ಶಿ ಮನೋಜ್ ಕುಮಾರ್ ಮೀನಾ ಮಾಹಿತಿ ನೀಡಿದ್ದಾರೆ.

123 ತಾಲೂಕುಗಳಲ್ಲಿ ಸತತ 3 ವಾರ ಮಳೆಯಾಗಿಲ್ಲ: 123 ತಾಲೂಕುಗಳಲ್ಲಿ ಈಗಾಗಲೇ ಸತತ ಮೂರು ವಾರಗಳಿಂದ ಮಳೆಯಾಗಿಲ್ಲ. ಹೀಗಾಗಿ ಈ ತಾಲೂಕುಗಳು ಮಾನದಂಡದ ಪ್ರಕಾರ ಬರದ ವ್ಯಾಪ್ತಿಗೆ ಸೇರ್ಪಡೆಯಾಗಲಿವೆ. ಮಾನದಂಡದ ಪ್ರಕಾರ ಕನಿಷ್ಠ ಮೂರು ವಾರ ತಾಲೂಕುಗಳಲ್ಲಿ ಮಳೆ ಬರಬಾರದು. ಅದರಂತೆ ಈ 123 ತಾಲೂಕುಗಳಲ್ಲಿ ಮಳೆಯಾಗದೇ ಇರುವುದರಿಂದ ಬರ ಮಾರ್ಗಸೂಚಿ 2020 ಮಾನದಂಡದ ಪ್ರಕಾರ ಗ್ರೌಂಡ್ ಟ್ರೂಥಿಂಗ್ ಮಾಡಲಾಗುತ್ತಿದ್ದು, ಬಳಿಕ ಸರ್ಕಾರಕ್ಕೆ ವರದಿ ನೀಡಲಾಗುತ್ತದೆ. ಸೆಪ್ಟಂಬರ್ ಅಂತ್ಯದವರೆಗೆ ಬರ ಪರಿಸ್ಥಿತಿ ತಾಲೂಕುಗಳ ಪರಿಶೀಲನೆ ಮಾಡಲಾಗುತ್ತದೆ. ಅದರ ಆಧಾರದಲ್ಲಿ ಇನ್ನೊಂದು ಹಂತದಲ್ಲಿ ಬರ ಘೋಷಣೆ ಮಾಡಲಾಗುವುದು ಎಂದು ಡಿಸಿಎಂ ಜಿ.ಪರಮೇಶ್ವರ್ ಹೇಳಿದ್ದಾರೆ.

ಕೆಲವು ತಾಲೂಕುಗಳಲ್ಲಿ ಎರಡು ವಾರ ಮಳೆ ಇಲ್ಲದೆ ಮಧ್ಯದಲ್ಲಿ ಆಗೊಮ್ಮೆ ಈಗೊಮ್ಮೆ ಮಳೆ ಬಂದರೂ ಅದು ಟ್ರಿಗರ್-1 ಪ್ರಕಾರ ಅರ್ಹತೆ ಕಳೆದುಕೊಳ್ಳುತ್ತದೆ. ಆದರೆ, ಅಂಥ ಕಡೆ ಬೆಳೆಯಾಗಿರುವುದಿಲ್ಲ. ಆದರೂ ಅವುಗಳನ್ನು ಬರಪೀಡಿತ ಎಂದು ಘೋಷಿಸಲು ಆಗುವುದಿಲ್ಲ. ಹವಾಮಾನ ಸಂಸ್ಥೆಗಳು ನೀಡಿರುವ ಮಾಹಿತಿಯಂತೆ ನೈಋತ್ಯ ಮುಂಗಾರಿನ ದ್ವಿತೀಯಾರ್ಧದಲ್ಲಿ ಆಗಸ್ಟ್-ಸೆಪ್ಟಂಬರ್ ತಿಂಗಳಲ್ಲೂ ರಾಜ್ಯದ ಬಹುಪಾಲು ಪ್ರದೇಶಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ. ಹೀಗಾಗಿ ಮುಂದಿನ ದಿನಗಳಲ್ಲಿ ಬರ ಪೀಡಿತ ತಾಲೂಕುಗಳ ಸಂಖ್ಯೆ ಇನ್ನಷ್ಟು ಹೆಚ್ಚುವ ಸಾಧ್ಯತೆ ಇದೆ ಎಂದು ಕಂದಾಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ರಾಜ್ಯದಲ್ಲಿ ಈ ಬಾರಿ ಎಲ್ ನಿನೋ ಪ್ರಭಾವದಿಂದ ಮಳೆಯ ಪ್ರಮಾಣ ಕಡಿಮೆಯಾಗಿದ್ದು, ಈ ಮಾಸಾಂತ್ಯದ ವೇಳೆಗೆ 180ರಿಂದ 200 ತಾಲೂಕು ಬರಪೀಡಿತ ಎಂದು ಘೋಷಣೆ ಆಗುವ ಸಾಧ್ಯತೆ ಇದೆ. ಈಗಾಗಲೇ 101 ತಾಲೂಕುಗಳನ್ನು ಬರ ಪೀಡಿತ ಎಂದು ಘೋಷಿಸಲಾಗಿದೆ. ಶೀಘ್ರವೇ 24 ಬ್ಲಾಕ್‌ಗಳನ್ನು ಬರಪೀಡಿತ ಎಂದು ಘೋಷಿಸಲು ಸಿದ್ಧತೆ ನಡೆದಿದೆ. ಮಾಸಾಂತ್ಯಕ್ಕೆ ನಡೆಯುವ ಮತ್ತೊಂದು ಗ್ರೌಂಡ್ ಟ್ರೂಥಿಂಗ್‌ನಲ್ಲಿ ಈ ಸಂಖ್ಯೆ ಹೆಚ್ಚಳವಾಗಿ 180ರಿಂದ 200ಕ್ಕೆ ತಲುಪಲಿದೆ ಎಂದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ ಖಂಡ್ರೆ ಹೇಳಿದ್ದಾರೆ.

ಬಿತ್ತಿರುವ 60 ಲಕ್ಷ ಹೆಕ್ಟೇರ್ ಬಿತ್ತನೆಯೂ ಒಣಗಿವೆ: ಆಗಸ್ಟ್ 21ರ ವರೆಗಿನ ಅಂಕಿ ಅಂಶದಂತೆ ರಾಜ್ಯದಲ್ಲಿ ಶೇ.71 ರಷ್ಟು ಬಿತ್ತನೆ ಆಗಿದೆ. 84.10 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ಬಿತ್ತನೆ ಗುರಿ ಇತ್ತು. ಈ ಪೈಕಿ 60 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆ ಆಗಿದೆ. ಇವೆಲ್ಲವು ಮಳೆ ಕೊರತೆಯಿಂದ ಒಣಗಿವೆ ಎಂದು ಡಿಸಿಎಂ ತಿಳಿಸಿದ್ದಾರೆ.

ಒಟ್ಟು 240 ತಾಲೂಕುಗಳ ಪೈಕಿ 104 ತಾಲೂಕುಗಳಲ್ಲಿ ಶೇ.75ಕ್ಕಿಂತ ಕಡಿಮೆ ಬಿತ್ತನೆಯಾಗಿದೆ. ಅದರಲ್ಲಿ 42 ತಾಲೂಕುಗಳಲ್ಲಿ ಶೇ.25 ಕ್ಕಿಂತಲೂ ಕಡಿಮೆ ಬಿತ್ತನೆಯಾಗಿವೆ. ಬಿತ್ತನೆಯಾಗಿರುವ ಬೆಳೆಗಳಲ್ಲಿ ಭತ್ತ ಶೇ.60, ರಾಗಿ ಶೇ.57, ಶೇಂಗಾ ಶೇ.34, ಮೆಕ್ಕೆಜೋಳ ಶೇ.84 ಹಾಗೂ ತೊಗರಿ ಶೇ.89ರಷ್ಟು ಮಾತ್ರ ವಾಡಿಕೆ ಬಿತ್ತನೆಯಾಗಿದೆ. ತೋಟಗಾರಿಕೆ ಬೆಳೆಗಳು ಆಗಸ್ಟ್ 25ರವರೆಗಿನ ಮಾಹಿತಿಯಂತೆ 4.36 ಲಕ್ಷ ಹೆಕ್ಟೇರ್‌ಗಳ ಪೈಕಿ ಕೇವಲ 3.04 ಲಕ್ಷ ಹೆಕ್ಟೇರ್‌ಗಳಲ್ಲಿ (ಶೇ.69) ಮಾತ್ರ ಬಿತ್ತನೆಯಾಗಿವೆ. ಮಳೆ ಕೊರತೆಯ ಹಿನ್ನೆಲೆ ಇವುಗಳು ಒಣಗಿವೆ ಎಂದು ಕಂದಾಯ ಸಚಿವ ಪರಮೇಶ್ವರ್ ಮಾಹಿತಿ ನೀಡಿದ್ದಾರೆ.

ಮಣ್ಣಿನ ತೇವಾಂಶದಲ್ಲೂ ತೀವ್ರ ಕುಸಿತ: ಕಂದಾಯ ಇಲಾಖೆ ನೀಡಿದ ಮಾಹಿತಿಯಂತೆ ಮಳೆಯ ಕೊರತೆಯಿಂದ ಮಣ್ಣಿನ ತೇವಾಂಶವೂ ತೀವ್ರವಾಗಿ ಕುಸಿದಿದೆ. ಆಗಸ್ಟ್ 26ರ ವರೆಗಿನ ತೇವಾಂಶ ಸಮರ್ಪಕತಾ ಸೂಚ್ಯಂಕದ ಪ್ರಕಾರ, ರಾಜ್ಯದ 178 ತಾಲೂಕುಗಳಲ್ಲಿ ಮಣ್ಣಿನ ತೇವಾಂಶದಲ್ಲಿ ತೀವ್ರ ಕೊರತೆ ಎದುರಾಗಿದೆ. ಇದರಲ್ಲಿ 86 ತಾಲೂಕುಗಳು ಅತಿ ತೀವ್ರ ಹಾಗೂ 92 ತಾಲೂಕುಗಳು ಸಾಧಾರಣ ತೇವಾಂಶ ಕೊರತೆಯನ್ನು ಎದುರಿಸುತ್ತಿವೆ. ಇದರ ಜೊತೆಗೆ ಆಗಸ್ಟ್ ಎರಡು ವಾರಗಳ ಉಪಗ್ರಹ ಮೌಲ್ಯಮಾಪನದಂತೆ 165 ತಾಲೂಕುಗಳಲ್ಲಿ ಸಸ್ಯವರ್ಗಗಳು ತೇವಾಂಶದ ಕೊರತೆಯಿಂದ ಒಣಗುತ್ತಿರುವುದು ದೃಢಪಟ್ಟಿದೆ.

ಅಣೆಕಟ್ಟುಗಳಲ್ಲಿ ಕೇವಲ ಶೇ.76 ರಷ್ಟು ನೀರು ಸಂಗ್ರಹ: ರಾಜ್ಯದ ಎಲ್ಲಾ ಅಣೆಕಟ್ಟುಗಳಲ್ಲಿ ಕಳೆದ ಬಾರಿ ಇದೇ ಅವಧಿಗೆ 815.70 ಟಿಎಂಸಿ ನೀರು ಸಂಗ್ರಹ ಇತ್ತು. ಆದರೆ, ಈ ಬಾರಿ 684 ಟಿಎಂಸಿ ಮಾತ್ರ ನೀರಿದೆ. ಮಹಾರಾಷ್ಟ್ರ, ಕರಾವಳಿ ಭಾಗಗಳಲ್ಲಿ ಮಳೆ ಆಗಿದ್ದರಿಂದ ಜಲಾಶಯಗಳಲ್ಲಿ ಸ್ವಲ್ಪ ನೀರು ತುಂಬಿದೆ. ಕೆಆರ್‌ಎಸ್‌ನಲ್ಲಿ ಶೇ.61, ಕಬಿನಿಯಲ್ಲಿ ಶೇ.66, ಹೇಮಾವತಿಯಲ್ಲಿ ಶೇ.83, ಹಾರಂಗಿಯಲ್ಲಿ ಶೇ.99 ರಷ್ಟು ನೀರು ತುಂಬಿದೆ. ಕಾವೇರಿ ನದಿ ಪಾತ್ರದ ನಾಲ್ಕು ಪ್ರಮುಖ ಅಣೆಕಟ್ಟುಗಳಲ್ಲಿ ಒಟ್ಟು ಶೇ.72 ನೀರು ಮಾತ್ರ ಶೇಖರಣೆ ಆಗಿದೆ. ಇನ್ನು ಕೃಷ್ಣಾ ನದಿ ಪಾತ್ರದಲ್ಲಿ ಘಟಪ್ರಭಾ ಜಲಾಶಯ ಶೇ.100, ಭದ್ರಾ ಶೇ.81, ತುಂಗಭದ್ರಾ ಶೇ.90, ನಾರಾಯಣಪುರ ಶೇ.100, ಆಲಮಟ್ಟಿ ಶೇ.99ರಷ್ಟು ನೀರು ಸಂಗ್ರಹವಾಗಿದೆ. ರಾಜ್ಯದ ಎಲ್ಲಾ ಜಲಾಶಯಗಳಲ್ಲಿ ಒಟ್ಟು ಶೇ.76 ರಷ್ಟು ನೀರು ಸಂಗ್ರಹಣೆ ಆಗಿದೆ ಎಂದು ಡಿಸಿಎಂ ಪರಮೇಶ್ವರ್ ವಿವರಿಸಿದ್ದಾರೆ.

ಇನ್ನು, ಮಳೆಯ ಕೊರತೆಯಿಂದ ರಾಜ್ಯದ ಅಂತರ್ಜಲ ಮಟ್ಟವೂ ಕುಸಿಯುತ್ತಿದೆ. 132 ತಾಲೂಕುಗಳಲ್ಲಿ ಕಳೆದ 10 ವರ್ಷಗಳ ಸರಾಸರಿಗೆ ಹೋಲಿಸಿದರೆ, ಈ ಬಾರಿ ಅಂತರ್ಜಲ ತೀವ್ರ ಮಟ್ಟಕ್ಕೆ ಕುಸಿದಿದೆ. 1,000 ಅಡಿಗೂ ಅಧಿಕ ಕೆಳ ಮಟ್ಟಕ್ಕೆ ಅಂತರ್ಜಲ ಇಳಿದಿದೆ. ಮುಂದಿನ ದಿನಗಳಲ್ಲಿ ಇದು ಇನ್ನಷ್ಟು ಕುಸಿಯುವ ಆತಂಕ ಇದೆ ಎಂದು ಇಲಾಖೆಯ ಅಧಿಕಾರಿಗಳು ಕಳವಳ ವ್ಯಕ್ತಪಡಿಸಿದ್ದಾರೆ.

ಕುಡಿಯುವ ನೀರಿನ ತೀವ್ರ ಕೊರತೆ: ಕುಡಿಯುವ ನೀರಿಗೆ ಭಾರಿ ಸಮಸ್ಯೆ ಆಗಿದೆ. ಕೆರೆ ಕಟ್ಟೆಗಳು, ಕೊಳವೆ ಬಾವಿಗಳಲ್ಲಿ ನೀರು ಬರಿದಾಗುತ್ತಿದೆ. 758 ಗ್ರಾಮಗಳ ಪೈಕಿ 190 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. 18 ಸ್ಥಳೀಯ ಸಂಸ್ಥೆಗಳ 114 ವಾರ್ಡ್‌ನಲ್ಲಿ 48 ಟ್ಯಾಂಕರ್‌ಗಳ ಮೂಲಕ ನೀರು ಪೂರೈಸಲಾಗುತ್ತಿದೆ. 2559 ಗ್ರಾ.ಪಂ. ಪೈಕಿ 2029 ಗ್ರಾ.ಪಂ.ಗಳಲ್ಲಿ ತೀವ್ರ ನೀರಿನ ಕೊರತೆಯ ಸಾಧ್ಯತೆ ಇದೆ ಎಂದು ಡಿಸಿಎಂ ಜಿ. ಪರಮೇಶ್ವರ್ ಆತಂಕ ವ್ಯಕ್ತಪಡಿಸಿದ್ದಾರೆ.

ಮೇವು ಕೊರತೆಯ ಭೀತಿ: ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಜಾನುವಾರುಗಳಿಗೆ ಮೇವಿನ ಸಮಸ್ಯೆ ಇದೆ. ಸದ್ಯ ರಾಜ್ಯದಲ್ಲಿ 151 ಲಕ್ಷ ಮೆಟ್ರಿಕ್ ಟನ್ ಮೇವು ಸಂಗ್ರಹ ಇದ್ದು, 33 ವಾರಗಳಿಗೆ ಮಾತ್ರ ಇದು ಸಾಕಾಗುತ್ತದೆ. 49 ತಾಲೂಕುಗಳಲ್ಲಿ 20 ವಾರಗಳಿಗೆ ಆಗುವಷ್ಟು ಮತ್ತು 18 ತಾಲೂಕುಗಳಲ್ಲಿ 20 ವಾರಗಳಿಗಿಂತಲೂ ಕಡಿಮೆ ಮೇವು ಸಂಗ್ರಹ ಇದೆ. ಪಾವಗಡದಲ್ಲಿ 10 ವಾರಕ್ಕೂ ಕಡಿಮೆ ಅವಧಿಗೆ ಆಗುವಷ್ಟು ಮೇವು ಸಂಗ್ರಹ ಇದೆ. ಜಿಲ್ಲಾವಾರು ಡಿಸಿಗಳಿಗೆ ಮೇವು ಖರೀದಿಸಿ ಕೊಡುವಂತೆ ಹೇಳಿದ್ದೇವೆ ಎಂದು ಮಾಹಿತಿ ನೀಡಿದ್ದಾರೆ.

ಬರದ ಪರಿಸ್ಥಿತಿಯಿಂದ ಉತ್ತರ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಜನರು ಗುಳೇ ಹೋಗುವುದನ್ನು ಸಚಿವರು ಒಪ್ಪಿಕೊಂಡಿದ್ದಾರೆ. ಪ್ರಮುಖವಾಗಿ ಬಾಗಲಕೋಟೆ, ವಿಜಯಪುರ, ಕೊಪ್ಪಳ, ವಿಜಯನಗರ, ರಾಯಚೂರು, ಯಾದಗಿರಿ, ಬಳ್ಳಾರಿ, ಗದಗ ಜಿಲ್ಲೆಯ ಜನರು ಗುಳೇ ಹೋಗುವುದು ಹೆಚ್ಚಿದೆ. ಹೀಗಾಗಿ ವಿಬಿ ಜಿ ರಾಮ್ ಜಿ ಯೋಜನೆಯಡಿ 16,460 ಕಾಮಗಾರಿಗಳನ್ನು ತೆಗೆದುಕೊಂಡು ಹೆಚ್ಚು ಮಾನವ ದಿನಗಳನ್ನು ನೀಡಲು ಡಿಸಿಗಳಿಗೆ ಸೂಚನೆ ನೀಡಲಾಗಿದೆ. ಕಳೆದ ಒಂದು ತಿಂಗಳಲ್ಲಿ ಅಂದರೆ ಜುಲೈ- ಆಗಸ್ಟ್ 24ರವರೆಗೆ 66.73 ಲಕ್ಷ ಮಾನವ ದಿನ ಸೃಜಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

306 ಕೋಟಿ ರೂ. ಕುಡಿಯುವ ನೀರಿಗಾಗಿ ಬಿಡುಗಡೆ: ಕುಡಿಯುವ ನೀರಿನ ಉದ್ದೇಶಕ್ಕಾಗಿ 31 ಜಿಲ್ಲೆಗಳಿಗೆ ಮೊದಲ ಹಂತದಲ್ಲಿ 117 ಕೋಟಿ ರೂ. ಅನುದಾನ ನೀಡಲಾಗಿದೆ. ಇದರ ಜೊತೆಗೆ ಪ್ರತಿ ಗ್ರಾಮೀಣ ಕ್ಷೇತ್ರಗಳಿಗೆ ತಲಾ 1 ಕೋಟಿ ರೂ. ನಂತೆ 189 ಕೋಟಿ ಅನುದಾನ ಬಿಡುಗಡೆ ಮಾಡಿದ್ದು, ಇದನ್ನೂ ಕುಡಿಯುವ ನೀರಿಗೆ ಉದ್ದೇಶಕ್ಕೆ ಬಳಸಲಾಗುತ್ತಿದೆ. ಆ ಮೂಲಕ ಒಟ್ಟು 306 ಕೋಟಿ ರೂಪಾಯಿ ಕುಡಿಯುವ ನೀರಿನ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆ. ಜೊತೆಗೆ 25 ಕೋಟಿ ರೂ. ಮೇವು ಕಿಟ್ ಖರೀದಿಗಾಗಿ ನೀಡಲಾಗಿದೆ. ಡಿಸಿಗಳ ಪಿಡಿ ಖಾತೆಗಳಲ್ಲಿ 329 ಕೋಟಿ ರೂ. ಹಣ ಇದ್ದು, ಇದನ್ನು ಬರಕ್ಕೆ ಮಾತ್ರ ಬಳಸಲು ಸೂಚನೆ ನೀಡಲಾಗಿದೆ. ಆ ಮೂಲಕ ಒಟ್ಟು ಸುಮಾರು 635 ಕೋಟಿ ರೂ. ಬರ ನಿರ್ವಹಣೆಗಾಗಿ ಹಣ ಬಳಕೆ ಹಾಗೂ ಮೀಸಲು ಇಡಲಾಗಿದೆ ಎಂದು ಪರಮೇಶ್ವರ್ ಅವರು ಮಾಹಿತಿ ನೀಡಿದ್ದಾರೆ.

16ನೇ ಹಣಕಾಸು ಆಯೋಗದ ಶಿಫಾರಸಿನಂತೆ ಎಸ್‌ಡಿಆರ್‌ಎಫ್ ಅಡಿ ಈ ಬಾರಿ ರಾಜ್ಯಕ್ಕೆ ₹1,239 ಕೋಟಿ ಮಂಜೂರು ಆಗಿದೆ. ಆದರೆ ಈವರೆಗೆ ಹಣ ಬಿಡುಗಡೆ ಆಗಿಲ್ಲ. ಇದರಲ್ಲಿ ರಾಜ್ಯದ ಪಾಲು 310 ಕೋಟಿ ರೂ. ಇದೆ. ಈ ಎಸ್‌ಡಿಆರ್‌ಎಫ್ ನಲ್ಲಿ ಮೊದಲ ತ್ರೈಮಾಸಿಕದಲ್ಲಿ 450 ಕೋಟಿ ಬಿಡುಗಡೆ ಮಾಡಬೇಕು. ಮಿಟಿಗೇಷನ್ ಫಂಡ್ ಅಡಿ 310 ಕೋಟಿ ರೂ. ಹಂಚಿಕೆಯಾಗಿದ್ದು, ಅದರಲ್ಲಿ 116 ಕೋಟಿ ರೂ. ಬಿಡುಗಡೆ ಆಗಿದೆ. ಬರ ಪೀಡಿತ ಎಂದು ಘೋಷಣೆಯಾದ ತಾಲೂಕುಗಳಿಗೆ ತಕ್ಷಣ ಎಸ್‌ಡಿಆರ್‌ಎಫ್ ನಿಧಿಯಲ್ಲಿ ಕುಡಿಯುವ ನೀರಿಗೆ ಹಣ ಬಳಕೆ ಮಾಡಲು ಅವಕಾಶ ಸಿಗಲಿದೆ. ಇನ್ನು ಇನ್ ಪುಟ್ ಸಬ್ಸಿಡಿ ರೂಪದಲ್ಲಿ ಬೆಳೆ ಪರಿಹಾರ ನೀಡಲು ಕೇಂದ್ರಕ್ಕೆ ವರದಿ ಸಲ್ಲಿಕೆ ಮಾಡಲಾಗುವುದು ಎಂದು ಅವರು ತಿಳಿಸಿದರು.

ಕೇಂದ್ರಕ್ಕೆ ಬರ ಪರಿಹಾರಕ್ಕೆ ಮನವಿ: ಬರ ಪರಿಹಾರ ಕೋರಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೇಂದ್ರ ಕೃಷಿ ಸಚಿವರಿಗೆ ಮನವಿ ಸಲ್ಲಿಸಲಿದ್ದೇವೆ. ಕಳೆದ ಬಾರಿ ಕೇಂದ್ರ ಸರ್ಕಾರ ರಾಜ್ಯಕ್ಕೆ ಪರಿಹಾರವಾಗಿ 3,500 ಕೋಟಿ ಹಣ ನೀಡಿತ್ತು. ಸುಪ್ರೀಂ ಕೋರ್ಟ್ ಮೊರೆ ಹೋದ ಬಳಿಕ 3,500 ಕೋಟಿ ರೂ. ಎನ್‌ಡಿಆರ್‌ಎಫ್ ಪರಿಹಾರ ಹಣ ಕೊಟ್ಟಿದ್ದರು. ಆ ಪರಿಸ್ಥಿತಿ ಈ ಬಾರಿ ನಿರ್ಮಾಣ ಮಾಡಬೇಡಿ ಎಂಬುದು ನಮ್ಮ ಮನವಿ. ರಾಜ್ಯದ ಜನ, ಜಾನುವಾರು ದೃಷ್ಟಿಯಿಂದ ಪರಿಹಾರ ಕೋರಿ ನೀಡುವ ಮನವಿಯನ್ನು ಪರಿಶೀಲಿಸಿ ಪರಿಹಾರ ಕೊಡಲು ಮನವಿ ಮಾಡುತ್ತೇವೆ. ಕಳೆದ ಬಾರಿ 39,000 ಕೋಟಿ ರೂ. ಬರ ನಷ್ಟ ಆಗಿತ್ತು. ಈ ಪೈಕಿ ನಾವು ಎನ್‌ಡಿಆರ್‌ಎಫ್ ಅಡಿ 18,000 ಕೋಟಿ ರೂ. ಪರಿಹಾರ ಕೊಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದೆವು. ಆದರೆ, ಕೇಂದ್ರ ಸರ್ಕಾರ ಕಡಿಮೆ ಅನುದಾನ ಮಾತ್ರ ಬಿಡುಗಡೆ ಮಾಡಿತ್ತು ಎಂದು ಕಂದಾಯ ಸಚಿವ ಜಿ. ಪರಮೇಶ್ವರ್ ತಿಳಿಸಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR